ಕನ್ನಡಪ್ರಭ
ಬುಧವಾರ 6.05.2026

ಗರಿಷ್ಠ 33°C | ಕನಿಷ್ಠ 22°C

ಸುದ್ದಿ ಸಿಂಚನ

ನಾಳೆಯಿಂದ ಗಂಗಮ್ಮ ದೇವಿ ಕರಗ ಮಹೋತ್ಸವ

ಬಾಗೇಪಲ್ಲಿ: ಪಟ್ಟಣದ ಗ್ರಾಮ ದೇವತೆ ಶ್ರೀ ಗಂಗಮ್ಮ ದೇವಿಯ 37ನೇ ವರ್ಷದ ಧರ್ಮರಾಯ ಹೂವಿನ ಕರಗ ಮಹೋತ್ಸವ ಮೇ 7ರಿಂದ 10ರವರೆಗೆ ಸಾವಿರಾ ರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆಯಲಿದೆ ಎಂದು ಗ್ರಾಮ ದೇವತೆ ಶ್ರೀ ಗಂಗಮ್ಮ ದೇವಿ ಕರಗ ಮಹೋತ್ಸವ ಸಮಿತಿ ಹಿರಿಯ ಮುಖಂಡ ಕಾರ್ಯ ದರ್ಶಿ ಎ.ಜಿ. ಸುಧಾಕರ್‌ತಿಳಿಸಿದ್ದಾರೆ. ದೇವಾಲಯದ ಕಚೇರಿಯಲ್ಲಿ ಕರಗ ಮಹೋತ್ಸವದ ಕರಪತ್ರ ಬಿಡುಗಡೆ ಮಾಡಿ ಮಾತನಾಡಿದ ಅವರು, 7ರಂದು ಗುರುವಾರ ರಾತ್ರಿ 8ಕ್ಕೆ ಹಸಿ ಕರಗಕ್ಕೆ ಚಾಲನೆ ನೀಡಲಾಗುತ್ತದೆ ಎಂದರು. ಮೇ 8 ಶುಕ್ರವಾರ ಬೆಳಿಗ್ಗೆ 9 ರಿಂದ ಸಂಜೆ 5 ರವರೆಗೆ ದೀಪೋತ್ಸವ, ಚೆಂಡೆ ವಾದ್ಯ, ಪಲ್ಲಕ್ಕಿ ಉತ್ಸವ ಮತ್ತು ಏಳು ಕಳಶ ಕರಗ ನಡೆಯಲಿದೆ. ಮೇ 9ಶನಿವಾರ ರಾತ್ರಿ 9 ಕ್ಕೆ ಮೇಲೂರು ವಹ್ನಿಕುಲ ಧರ್ಮೇಂದ್ರ ಹಾಗೂ ಅವರ ತಂಡದವರಿಂದ ಧರ್ಮರಾಯನ ಹೂವಿನ ಕರಗ ಅತ್ಯಂತ ವೈಭವವಾಗಿ ನೆರವೇರಲಿದೆ. ಮೇ 10 ಭಾನು ವಾರ ಸಂಜೆ 7 ಕ್ಕೆ ಒನಕೆ ಕರಗ ಕಾರ್ಯಕ್ರಮ ದೊಂದಿಗೆ ಮಹೋತ್ಸವ ಸಮಾರೋ ಪಗೊಳ್ಳಲಿದೆ ಎಂದರು. ಈ ಸಂದರ್ಭದಲ್ಲಿ ಬಿ.ಎಸ್. ನಾರಾಯಣ ಸ್ವಾಮಿ, ಪುರಸಭೆ ಮಾಜಿ ಅಧ್ಯಕ್ಷ ಶ್ರೀನಿವಾಸ್, ಸದಸ್ಯ ರಾದ ಗಡ್ಡಂ ರಮೇಶ್, ಜಿನ್ನಿ, ಸೂರ್ಯನಾ ರಾಯಣ ರೆಡ್ಡಿ, ಮರಿ ಯಪ್ಪ, ಸೂರ್ಯಶೇಖರ್, ಗಡ್ಡಂ ನರಸಪ್ಪ, ಮಂಜು ನಾಥ್, ಮೂರ್ತಿ, ವೆಂಕಟೇಶ್, ಅ.ನಾ. ಮೂರ್ತಿ, ಅರ್ಚಕರಾದ ಪುನೀತ್, ಅಭಿಷೇಕ್, ಗೋಪಾಲ, ಸುರೇಶ್, ಬಾಲಾಜಿ, ಆದಿಮೂರ್ತಿ, ವಕೀಲ ನಂಜುಂಡಪ್ಪ, ಶ್ರೀನಿವಾಸರೆಡ್ಡಿ ಮತ್ತಿತರರು ಇದ್ದರು.

ರಂಭಾಪುರಿ ಶ್ರೀಗಳ ಅದ್ದೂರಿ ಅಡ್ಡಪಲ್ಲಕ್ಕಿ ಉತ್ಸವ

ಗೌರಿಬಿದನೂರು: ನಗರದಲ್ಲಿ ವೀರಶೈವ ಲಿಂಗಾಯತ ಪಂಚಪೀಠಗಳ ಭಕ್ತರ ಬಳಗದಿಂದ ಹಮ್ಮಿಕೊಂಡಿದ್ದ ರಂಭಾಪುರಿ ವೀರಸಿಂಹಾಸನಾಧೀಶ್ವರ ಶ್ರೀ 1008 ಜಗ ದ್ಗುರು ಪ್ರಸನ್ನ ರೇಣುಕಾ ಡಾ.ವೀರಸೋಮೇಶ್ವರ ರಾಜದೇಶಿ ಕೇಂದ್ರ ಶಿವಾಚಾರ್ಯ ಮಹಾಸ್ವಾಮಿ ಭಗವತ್ಪಾದರ ಅಡ್ಡಪಲ್ಲಕ್ಕಿ ಉತ್ಸವ ನೆರವೇರಿತು. ಉತ್ಸವದ ಅಂಗವಾಗಿ ಜಗದ್ಗುರುಗಳನ್ನು ವಿಶೇಷವಾಗಿ ಅಲಂಕರಿಸಿದ ಪಲ್ಲಕ್ಕಿಯಲ್ಲಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿ ಗೆ ನಡೆಸಲಾಯಿತು. ಉತ್ಸವದಲ್ಲಿ ಯಡಿಯೂರು ಕ್ಷೇತ್ರದ ಬಾಳೆಹೊನ್ನೂರು ಮಠದ ಶ್ರೀ ರೇಣುಕ ಶಿವಾಚಾರ್ಯ ಸ್ವಾಮಿ, ಶಿವಗಂಗೆಯ ಮೇಲನಗವಿ ವೀರಸಿಂಹಾಸನ ಸಂಸ್ಥಾನ ಮಠದ ಶ್ರೀ ಪಟ್ಟದ ಡಾ.ಮಲಯ ಶಾಂತಮುನಿ ದೇಶಿಕೇಂದ್ರ ಶಿವಾಚಾರ್ಯ ಸ್ವಾಮಿ, ನೊಣವಿನಕೆರೆ ಮಠದ ಶ್ರೀ ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಮಹಾ ಸ್ವಾಮಿ, ಸಿದ್ದರಬೆಟ್ಟ ಶ್ರೀ ಕ್ಷೇತ್ರದ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿ, ಆನೇಕಲ್ಲು ತಾಲೂಕಿನ ರಾಜಾಪುರ ಸಂಸ್ಥಾನ ಮಠದ ಶ್ರೀ ರಾಜೇಶ್ವರ ಶಿವಾ ಚಾರ್ಯ ಸ್ವಾಮಿ, ಬೆಂಗಳೂರು ಶ್ರೀಮದ್ ವಿಭೂತಿಪುರ ವೀರಸಿಂಹಾಸನ ಸಂಸ್ಥಾನ ಮಠದ ಡಾ.ಮಹಾಂತಲಿಂಗ ಶಿವಾಚಾರ್ಯ ಸ್ವಾಮೀಜಿ, ನಾಗಲಾ ಪುರ ಸಂಸ್ಥಾನ ಮಠದ ಶ್ರೀ ತೇಜೇಶಲಿಂಗ ಶಿವಾಚಾ ರ್ಯ ಸ್ವಾಮಿ, ಶಿವಗಂಗೆ ಹೊನ್ನಮ್ಮ ದೇವಿ ಮಠದ ಶ್ರೀ ರುದ್ರುಮಿನಿ ಶಿವಾಚಾರ್ಯ ಮಹಾಸ್ವಾಮಿ ಭಾಗವಹಿಸಿದ್ದರು.

ದೊಡ್ಡದಾನವಹಳ್ಳಿ ಡೈರಿ ಕಟ್ಟಡಕ್ಕೆ ಗುದ್ದಲಿ ಪೂಜೆ

ಟೇಕಲ್: ಟೇಕಲ್‌ನ ದೊಡ್ಡದಾನವಹಳ್ಳಿ ಹಾಲು ಉತ್ಪಾದಕ ಸಹಕಾರ ಸಂಘಕ್ಕೆ ಸಂಘದ ಸದಸ್ಯರ ಮತ್ತು ನಿರ್ದೇಶಕರ ಮನವಿ ಮೇರೆಗೆ ಕೋಮುಲ್ ಅಧ್ಯಕ್ಷ ಕೆ. ವೈ. ನಂಜೇಗೌಡ ಒಕ್ಕೂಟದ ನಿರ್ದೇಶಕರ ವಿಶೇಷ ಅನುದಾನದಡಿ 5 ಲಕ್ಷ ರು., ಒಕ್ಕೂಟದ ಅನುದಾನದಲ್ಲಿ 3 ಲಕ್ಷ ರು. ಹಾಗೂ ಕರ್ನಾಟಕ ಹಾಲು ಮಹಾ ಮಂಡಳಿಯಿಂದ 4.5 ಲಕ್ಷ ರು. ಶಾಸಕರು ಬಿಡುಗಡೆ ಮಾಡಿಸಿದ್ದಾರೆಂದು ವಿಸ್ತರಣಾಧಿಕಾರಿ ವೆಂಕಟೇಶ್ ತಿಳಿಸಿದರು. ದೊಡ್ಡದಾನವಹಳ್ಳಿ ನೂತನ ಕಟ್ಟಡಕ್ಕೆ ಸಂಘದ ಅಧ್ಯಕ್ಷೆ ಲಕ್ಷ್ಮೀದೇವಮ್ಮ ಗುದ್ದಲಿ ಪೂಜೆ ನೆರವೇರಿಸಿದರು. ಸಂಘದ ನಿರ್ದೇಶಕರಾದ ವೆಂಕಟೇಶಪ್ಪ ಬಿ, ಚಿನ್ನಪ್ಪ, ಸುಧಮ್ಮ, ಅಶ್ವತಮ್ಮ, ಮಾರಪ್ಪ, ಹರೀಶ್ ಕುಮಾರ್, ಗಿರೀಶ್, ಜಗದೀಶ್, ಮುನಿಯಪ್ಪ, ನಾರಾಯಣಪ್ಪ, ಶ್ರೀನಿವಾಸ್, ಕಾರ್ಯದರ್ಶಿ ರವಿಕುಮಾರ್ ಇದ್ದರು.



ಕರಗ ಮಹೋತ್ಸವದ ಅಂಗವಾಗಿ ಬಾಗೇಪಲ್ಲಿ ಗ್ರಾಮದೇವತೆ ಗಂಗಮ್ಮ ದೇವಿ ಟ್ರಸ್ಟ್ ವತಿಯಿಂದ ಕರಗ ಮಹೋತ್ಸದದ ಕರಪತ್ರವನ್ನು ಹಿರಿಯ ಮುಖಂಡ ಎ.ಜಿ. ಸುಧಾಕರ್ ಬಿಡುಗಡೆಗೊಳಿಸಿದರು.ಬಿ.ಎಸ್. ನಾರಾಯಣಸ್ವಾಮಿ, ಶ್ರೀನಿವಾಸ್, ಗಡ್ಡಂ ರಮೇಶ್ ಮತ್ತಿತರರು ಇದ್ದರು.




ಗೌರಿಬಿದನೂರಲ್ಲಿ ವೀರಶೈವ ಲಿಂಗಾಯಿತ ಪಂಚಪೀಠಗಳ ಭಕ್ತರ ಬಳಗದಿಂದ ಹಮ್ಮಿಕೊಂಡಿದ್ದ ಶ್ರೀಮದ್ ಜಗದ್ಗುರು ರಂಭಾಪುರಿ ವೀರಸಿಂಹಾಸನಾ ಧೀಶ್ವರ ಶ್ರೀ 1008 ಜಗದ್ಗುರು ಪ್ರಸನ್ನ ರೇಣುಕ ಡಾ.ವೀರಸೋಮೇ ಶ್ವರ ರಾಜದೇಶಿ ಕೇಂದ್ರ ಮಹಾಸ್ವಾಮಿಗಳ ಅಡ್ಡಪಲ್ಲಕ್ಕಿ ಉತ್ಸವ ನೆರವೇರಿತು.

ಹೆಚ್ಚಿನ ಸುದ್ದಿ ಪುಟ 9ರಲ್ಲಿ

ಕೆಜಿಎಫ್ ಕುಖ್ಯಾತ ರೌಡಿ ಕಲಬುರಗಿಗೆ ಗಡಿಪಾರು

• **ಕನ್ನಡಪ್ರಭ ವಾರ್ತೆ,** ಕೆಜಿಎಫ್



ಸಾರ್ವಜನಿಕರಲ್ಲಿ ಭೀತಿ ಉಂಟು ಮಾಡುತ್ತಿದ್ದ ಇಲ್ಲಿನ ಆಂಡ್ರಸನ್‌ಪೇಟೆಯ ಊರ್ದುನಗರದ ನಿವಾಸಿ ಯಾದ ಸ್ಟ್ಯಾನ್ಲಿ (65) ಯನ್ನು ಗಡಿಪಾರು ಮಾಡಿ ಜಿಲ್ಲಾ ಪೊಲೀಸ್ ಎಸ್ಪಿ ಶಿವಾಂಶು ರಜ ಪೂತ್ ಆದೇಶ ಹೊರಡಿಸಿದ್ದಾರೆ. ಕಾನೂನು ಬಾಹಿರ ಚಟು ವಟಿಕೆ ಗಳಲ್ಲಿ ಭಾಗಿಯಾ ಗುತ್ತಿ ದ್ದ ಸ್ಟ್ಯಾನ್ಲಿ ವಿರುದ್ಧ 3 ಕೊಲೆ ಪ್ರಯತ್ನ, 1 ದೊಂಬಿ, 1 ಮನೆ ಕನ್ನ, 1 ಡಿ.ಎಂ ಆಕ್ಟ್, 1 ವಂಚನೆ, 2 ಭದ್ರತಾ ಕಾ ಯ್ದೆ ಪ್ರಕರಣ ಒಟ್ಟು 9 ಪ್ರಕರಣಗಳು ದಾಖಲಾಗಿದ್ದು 2018ನೇ ಸಾಲಿ ನಲ್ಲಿ 1 ಕೊಲೆ ಪ್ರಯತ್ನ ಪ್ರಕರಣದಲ್ಲಿ ನ್ಯಾಯಾ ಲಯವು ಈತನಿಗೆ 2 ವರ್ಷ ಜೈಲು ಶಿಕ್ಷೆ ಮತ್ತು 2500 ರು. ಸಹ ದಂಡ ವಿದಿಸಿದೆ. ಈತನ ವಿರುದ್ಧ ಆಂಡ್ರಸನ್‌ಪೇಟೆ ಠಾಣೆಯ ಪಿ.ಎಸ್.ಐ ಮಂಜುನಾಥ ಬಿ., ಗಡಿಪಾರು ಕಾಯ್ದೆಯಡಿಯಲ್ಲಿ ಕ್ರಮ ಕೈಗೊಳ್ಳಲು ಕೋರಿ ಪ್ರಸ್ತಾವನೆ ಸಲ್ಲಿಸಿದ್ದರು. ಕಲಬುರಗಿ ಜಿಲ್ಲೆಗೆ ಗಡಿಪಾರು ಕಾಯ್ದೆಯಡಿಯಲ್ಲಿ 1 ವರ್ಷ ಅವಧಿಗೆ ಕಲ ಬುರಗಿ ಜಿಲ್ಲೆಯ ಆಳಂದ ನಗರ ಠಾಣೆ ವ್ಯಾಪ್ತಿಗೆ ಗಡಿ ಪಾರು ಮಾಡಿ ಆದೇಶಿಸಿದ್ದಾರೆ.

ರೈತರಿಗೆ ಸರ್ವಿಸ್ ರಸ್ತೆ ನಿರ್ಮಾಣಕ್ಕೆ ಡಿಸಿ ಸೂಚನೆ

ಮಧ್ಯಸ್ಥಗಾರರ ಸಮಾಲೋಚನಾ ಸಭೆಯಲ್ಲಿ ಅಧಿಕಾರಿಗಳಿಗೆ ತಾಕೀತು | ಕಾರಿಡಾರ್, ಎಕ್ಸ್‌ಪ್ರೆಸ್‌ವೇನಲ್ಲಿ ರೈತರ ಹಿತರಕ್ಷಣೆಗೆ ಆದ್ಯತೆ ನೀಡಿ

• **ಕನ್ನಡಪ್ರಭ ವಾರ್ತೆ** ಕೋಲಾರ

ಜಿಲ್ಲೆಯಲ್ಲಿ ನೂತನವಾಗಿ ಪ್ರಸ್ತಾಪಿಸಲಾಗಿರುವ ರಾಷ್ಟ್ರೀಯ ಹೆದ್ದಾರಿ ಕಾರಿಡಾರ್‌ಹಾಗೂ ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇ ಸಂಪರ್ಕ ರಸ್ತೆ ಯೋಜನೆಗಳ ಅಂತಿಮ ಜೋಡಣೆ ಸಂದರ್ಭದಲ್ಲಿ ಜಿಲ್ಲೆಯ ರೈತರ ಹಿತರಕ್ಷಣೆ ಹಾಗೂ ಸೇವಾ ರಸ್ತೆಗಳನ್ನು ಸಂಪರ್ಕ ಮಾಡಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯ ಕೇಸ್ವಾನ್ ಸಭಾಂಗಣದಲ್ಲಿ ಮಂಗಳವಾರ ನಡೆದ ಉನ್ನತ ಮಟ್ಟದ ಮಧ್ಯಸ್ಥಗಾರರ ಸಮಾಲೋಚನಾ ಸಭೆಯಲ್ಲಿ ಅವರು ಮಾತನಾಡಿದರು.

ಯೋಜನೆಗಳ ಅನುಷ್ಠಾನದ ವೇಳೆ ಪರಿಸರ ಸೂಕ್ಷ್ಮ ವಲಯಗಳ ಸಂರಕ್ಷಣೆ ಮತ್ತು ಕೃಷಿಕರ ಹಿತರಕ್ಷಣೆಗೆ ಸಭೆಯಲ್ಲಿ ಮೊದಲ ಆದ್ಯತೆ ನೀಡಲು ಸೂಚಿಸಿದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಭಾರಿ ವಾಹನ ದಟ್ಟಣೆ ನಿಯಂತ್ರಣಕ್ಕಾಗಿ ಪ್ರಸ್ತಾಪಿಸಲಾಗಿರುವ ಕುಪ್ಪಂ ಕಾರಿಡಾರ್ ಯೋಜನೆಗೆ ಸಂಬಂಧಿಸಿದಂತೆ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಯಿತು. ಈ ಹಿಂದೆ ಯೋಜಿಸಲಾಗಿದ್ದ ಮಾರ್ಗವು ಕಾಮಸಮುದ್ರಂ ವನ್ಯಜೀವಿ ಧಾಮದ ಪರಿಸರ ಸೂಕ್ಷ್ಮ ವಲಯದ ಮೂಲಕ ಹಾದು ಹೋಗುತ್ತಿತ್ತು. ಇದರಿಂದಾಗಿ ಉಂಟಾಗಬಹುದಾದ ಕಾನೂನು ತೊಡಕುಗಳು ಹಾಗೂ ಅರಣ್ಯ ನಾಶವನ್ನು ತಪ್ಪಿಸಲು ಸಭೆಯಲ್ಲಿ ನೂತನ ನಕ್ಷೆಗಳನ್ನು ಪರಿಶೀಲಿಸಿದರು.

ಸೂಕ್ಷ್ಮ ಮಾರ್ಪಾಡು ಮಾಡಿ: ವನ್ಯಜೀವಿ ಧಾಮದ ಪ್ರಮುಖ ವಲಯಕ್ಕೆ ಧಕ್ಕೆಯಾಗದಂತೆ, ಪರಿಸರ ಸೂಕ್ಷ್ಮ ವಲಯದಿಂದಸಂಪೂರ್ಣಹೊರಗುಳಿಯುವ ಬಂಗಾರಪೇಟೆ ಕಡೆಯ 'ಆಯ್ಕೆ-1' ಮಾರ್ಗವೇ ಅತ್ಯಂತ ಸೂಕ್ತ ಎಂದು ಜಿಲ್ಲಾಧಿಕಾರಿ ಅಭಿಪ್ರಾಯಪಟ್ಟರು. ಆದರೆ, ಈ ಮಾರ್ಗದಲ್ಲಿ ಬರುವ ನೀರಾವರಿ ಹೊಂಡಗಳ ಸಂರಕ್ಷಣೆಗಾಗಿ ಸಣ್ಣ ನೀರಾವರಿ ಇಲಾಖೆಯೊಂದಿಗೆ ಜಂಟಿ ಸಮೀಕ್ಷೆ ನಡೆಸಿ ಸೂಕ್ಷ್ಮ ಮಾರ್ಪಾಡುಗಳನ್ನು ಮಾಡಲು ಹೆದ್ದಾರಿ ಪ್ರಾಧಿಕಾರಕ್ಕೆ ಸೂಚಿಸಿದರು.

6-ಪಥದ ಹೆದ್ದಾರಿ ನಿರ್ಮಾಣದಿಂದ ಗ್ರಾಮಗಳ ಹಾಗೂ ರೈತರ ಕೃಷಿ ಭೂಮಿಗಳು ವಿಭಜನೆಗೊಳ್ಳುವುದನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾಧಿಕಾರಿ ಹೆದ್ದಾರಿಯ ಇಕ್ಕೆಲಗಳಲ್ಲಿ ಕಡ್ಡಾಯವಾಗಿ ಕನಿಷ್ಠ 7 ಮೀಟರ್‌ಅಗಲದ ಸರ್ವಿಸ್ ರಸ್ತೆಗಳನ್ನು ನಿರ್ಮಿಸಬೇಕು, ರೈತರಿಗೆ ತಮ್ಮದೇ ಜಮೀನುಗಳಿಗೆ ಹೋಗಲು ಮುಕ್ತ ಪ್ರವೇಶ ನಿರಾಕರಿಸುವುದು ಅವರ ಹಕ್ಕುಗಳ ಉಲ್ಲಂಘನೆಯಾಗುತ್ತದೆ. ಈ ಹಿಂದಿನ ಯೋಜನೆಗಳಲ್ಲಿ ಸರ್ವಿಸ್ ರಸ್ತೆಗಳ ಕೊರತೆಯಿಂದಾಗಿ ಎದುರಾಗಿರುವ ನ್ಯಾಯಾಲಯದ ಪ್ರಕರಣ ಗಮನದಲ್ಲಿಟ್ಟುಕೊಳ್ಳಬೇಕು. ಹೀಗಾಗಿ ಹೆದ್ದಾರಿಯ ಒಟ್ಟು ಅಗಲವನ್ನು 60 ಮೀಟರ್‌ಗಳಿಗೆ ನಿಗದಿಪಡಿಸಿ, ಸರ್ವಿಸ್ ರಸ್ತೆ ಅಳವಡಿಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ತಿಳಿಸಿದರು.

ಡಿಸಿ ಅಸಮಾಧಾನ: ಸಭೆಗೆ ಗೈರುಹಾಜರಾಗಿದ್ದ ಮತ್ತು ಹೆದ್ದಾರಿ ಯೋಜನೆಗೆ ಪೂರಕ ಮಾಹಿತಿ ನೀಡಲು ವಿಳಂಬ ಮಾಡುತ್ತಿರುವ ಕೆಲವು ಇಲಾಖೆಗಳ ಅಧಿಕಾರಿಗಳ ವಿರುದ್ಧ ಜಿಲ್ಲಾಧಿಕಾರಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಅರಣ್ಯ ಇಲಾಖೆ, ಕಂದಾಯ ಇಲಾಖೆ, ಬೆಸ್ಕಾಂ, ಕೆಪಿಟಿಸಿಎಲ್ ಮತ್ತು ಸಣ್ಣ ನೀರಾವರಿ ಇಲಾಖೆಗಳು ತಕ್ಷಣವೇ ಹೆದ್ದಾರಿ ಪ್ರಾಧಿಕಾರದೊಂದಿಗೆ ಸಮನ್ವಯ ಸಾಧಿಸಿ ಭೂಸ್ವಾಧೀನ ಪ್ರಕ್ರಿಯೆ, ಜಮೀನಿನ ವಿವರಗಳು ಹಾಗೂ ವಿದ್ಯುತ್ ಕಂಬಗಳ ಸ್ಥಳಾಂತರಕ್ಕೆ ಅಗತ್ಯ ವರದಿ ನೀಡಬೇಕು ಎಂದು ಗಡುವು ವಿಧಿಸಿದರು.

ಸಭೆಯಲ್ಲಿ ಜಿಪಂ ಸಿಇಒ ಡಾ.ಪ್ರವೀಣ್ ಪಿ.ಬಾಗೇವಾಡಿ, ಕೋಲಾರ ಎಸ್‌ಪಿ ಕನ್ನಿಕಾ ಸಿಕ್ರಿವಾಲ್, ಕೆಜಿಎಫ್ ಎಸ್‌ಪಿ ಶಿವಾಂಶು ರಜಪೂತ, ಎಸಿ ಜಂಬಗಿ ರೇಣುಕಾ ಪ್ರಸಾದ್ ದಿಲೀಪ್, ಮಾಲೂರು ತಹಸೀಲ್ದಾರ್‌ರೂಪ, ಬಂಗಾರಪೇಟೆ ತಹಸೀಲ್ದಾರ್‌ಸುಜಾತಾ ಇದ್ದರು.



ಕೋಲಾರದ ಜಿಲ್ಲಾಧಿಕಾರಿ ಕಚೇರಿಯ ಕೇಸ್ವಾನ್ ಸಭಾಂಗಣದಲ್ಲಿ ಉನ್ನತ ಮಟ್ಟದ ಮಧ್ಯಸ್ಥಗಾರರ ಸಮಾಲೋಚನಾ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಮಾತನಾಡಿದರು.

ಪಿಡಿಒ ಆತ್ಮಹತ್ಯೆ ಖಂಡಿಸಿ ಕೋಲಾರದಲ್ಲಿ ಆಕ್ರೋಶ

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಕಾರ್ಯಕರ್ತರಿಂದ ಜಿಪಂ ಮುಂದೆ ಪ್ರತಿಭಟನೆ

• **ಕನ್ನಡಪ್ರಭ ವಾರ್ತೆ** ಕೋಲಾರ

ಅತಿಯಾದ ಕೆಲಸದ ಒತ್ತಡ, ಬಾಕಿ ವೇತನ ಬಿಡುಗಡೆಯಲ್ಲಿನ ವಿಳಂಬ ಹಾಗೂ ಮಾನಸಿಕ ಕಿರುಕುಳಕ್ಕೆ ಬೇಸತ್ತು ಗದಗ ಜಿಲ್ಲೆಯ ರೋಣ ತಾಲೂಕಿನ ಕೊತಬಾಲ ಗ್ರಾಪಂ ಪಿಡಿಒ ಮುಕ್ತಂಹುಸೇನ ಕರಡಿಗುಡ್ಡ ಆತ್ಮಹತ್ಯೆ ಖಂಡಿಸಿ ರಾಜ್ಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದಿಂದ ಜಿಪಂ ಮುಂದೆ ಪ್ರತಿಭಟನೆ ನಡೆಸಿದರು.

ಪಿಡಿಒಗಳ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಅಧ್ಯಕ್ಷ ಕೆ. ಮಹೇಶ್ ಕುಮಾರ್‌ಮಾತನಾಡಿ, ರಾಜ್ಯದ ಗದಗ ಜಿಲ್ಲೆಯ ಮುಕ್ತಂಹುಸೇನ ಕರಡಿಗುಡ್ಡ ಅವರು ಅಸೂಟಿ ಹಾಗೂ ಕೊತಬಾಲ ಎರಡು ಪಂಚಾಯಿತಿಗಳ ಹೆಚ್ಚುವರಿ ಪ್ರಭಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದರು. ಈ ಹಿಂದೆ ಧಾರವಾಡದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ದಾಖಲಾಗಿದ್ದ ಲೋಕಾಯುಕ್ತ ಪ್ರಕರಣದ ಕಾರಣಕ್ಕೆ ಅಮಾನತುಗೊಂಡು, ಕಳೆದ 8-9 ತಿಂಗಳಿಂದ ಅವರಿಗೆ ಯಾವುದೇ ವೇತನ ಪಾವತಿಯಾಗಿರಲಿಲ್ಲ. ಕೇವಲ ಎರಡು ತಿಂಗಳ ಹಿಂದೆಯಷ್ಟೇ ಅವರು ಮರಳಿ ಕರ್ತವ್ಯಕ್ಕೆ ಹಾಜರಾಗಿದ್ದರು. ಆರ್ಥಿಕ ಮುಗ್ಗಟ್ಟು ಎಷ್ಟರ ಮಟ್ಟಿಗಿತ್ತೆಂದರೆ, ಅವರ ಪತ್ನಿ ಉದ್ಯೋಗ ಅರಸಿ ಬೆಂಗಳೂರಿಗೆ ತೆರಳುವಂತಹ ಸ್ಥಿತಿ ಎದುರಾಗಿತ್ತು. ಇಂತಹ ಭೀಕರ ಪರಿಸ್ಥಿತಿಯು ಇಡೀ ರಾಜ್ಯದ ಪಿಡಿಒಗಳು ಎದುರಿಸುತ್ತಿರುವ ನೈಜ ಸ್ಥಿತಿಗೆ ಹಿಡಿದ ಕನ್ನಡಿ ಎಂದು ಆಕ್ರೋಶ ವ್ಯಕ್ತಪಡಿಸಿದರು

ಸರ್ಕಾರಿ ನೌಕರರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸತೀಶ್, ಪಿಡಿಒಗಳ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಉಪಾಧ್ಯಕ್ಷೆ ಎನ್. ದೀಪ, ಜಿಲ್ಲಾ ಸಂಘದ ಗೌರವಾಧ್ಯಕ್ಷ ಕಾಶೀನಾಥ್, ಕಾರ್ಯಾಧ್ಯಕ್ಷ ರಾಮಕೃಷ್ಣ, ಪದಾಧಿಕಾರಿಗಳಾದ ಮೋಹನ್ ಕುಮಾರ್, ರಮೇಶ್, ಎಜಾಜ್ ಪಾಷಾ, ಶ್ರೀನಿವಾಸ್ ಮೂರ್ತಿ, ಜಗದೀಶ್, ಅಂಬರೀಶ್, ಅಶ್ವತ್ ನಾರಾಯಣ, ಶಂಕರ್, ಮಂಜುನಾಥ್ ಇದ್ದರು.



ಗದಗ ಜಿಲ್ಲೆಯ ರೋಣ ತಾಲೂಕಿನ ಕೊತಬಾಲ ಗ್ರಾ.ಪಂ ಪಿಡಿಒ ಆತ್ಮಹತ್ಯೆ ಖಂಡಿಸಿ ಜಿಲ್ಲಾ ಕ್ಷೇಮಾಭಿವೃದ್ಧಿ ಸಂಘದಿಂದ ಕೋಲಾರದ ಜಿ.ಪಂ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಬಾಗೇಪಲ್ಲಿಯಲ್ಲಿ ಬಿಜೆಪಿ ಸಂಭ್ರಮ



ಪಶ್ಚಿಮ ಬಂಗಾಳ, ಅಸ್ಸಾಂ ಮತ್ತು ಪಾಂಡಿಚೇರಿ ರಾಜ್ಯಗಳಲ್ಲಿ ಬಿಜೆಪಿ ಮುನ್ನಡೆಯಿರುವ ಹಿನ್ನಲೆಯಲ್ಲಿ ಬಾಗೇಪಲ್ಲಿಯಲ್ಲಿ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚುವ ಮೂಲಕ ವಿಜಯೋತ್ಸವ ಆಚರಿಸಿದರು.

ಬಾಗೇಪಲ್ಲಿ: ಪಶ್ಚಿಮ ಬಂಗಾಳ, ಪಾಂಡಿ ಚೇರಿ ಮತ್ತು ಅಸ್ಸಾಂ ರಾಜ್ಯಗಳಲ್ಲಿ ಬಿಜೆಪಿ ವಿಜಯದ ಹಿನ್ನಲೆಯಲ್ಲಿ ಸ್ಥಳೀಯ ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚುವ ಮೂಲಕ ವಿಜಯೋತ್ಸವ ಆಚರಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲಾಧ್ಯಕ್ಷ ಆರ್. ಪ್ರತಾಪ್ ಮಾತನಾಡಿ, ಪ್ರಧಾನಿ ಮೋದಿ ಅವರ ಜನಪರ ಆಡಳಿತವೇ ಈ ರಾಜ್ಯಗಳಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಪ್ರಮುಖ ಕಾರಣವಾಗಿದೆ. ಮುಂದಿನ ದಿನಗಳಲ್ಲಿ ದೇಶದಲ್ಲಿ ಕಾಂಗ್ರೆಸ್ ಮುಕ್ತ ಭಾರತವ ನ್ನಾಗಿಸುವುದೇ ಬಿಜೆಪಿ ಮುಖ್ಯ ಅಜೆಂಡಾ ಆಗಿದೆ ಎಂದರು.

ಈ ಸಂದರ್ಭದಲ್ಲಿ ಗುಡಿಬಂಡೆ ಮಂಡ ಲಾಧ್ಯಕ್ಷ ಗಂಗಿರೆಡ್ಡಿ, ಪಕ್ಷದ ಮುಖಂಡರಾದ ವೆಂಕಟೇಶ್, ಕೆ.ಟಿ. ವೀರಾಂಜನೇಯಲು, ಸುನಿಲ್ ಕುಮಾರ್, ಚಿನ್ನಪೂಜಪ್ಪ, ಗಂಗರಾಜು, ಲೋಕೇಶ್, ಮಹಿಳಾ ಮೋರ್ಚಾ ಅಧ್ಯಕ್ಷೆ ಮಂಜುಳಾ, ರೂಪ, ಗಂಗುಲಮ್ಮ ಮತ್ತಿತರರು ಇದ್ದರು.

ಅನ್ನಭಾಗ್ಯ ಯೋಜನೆಯಡಿ ಪಡಿತರ ವಿತರಣೆ

ಚಿಕ್ಕಬಳ್ಳಾಪುರ: ಸಾರ್ವಜನಿಕ ವಿತರಣಾ ಪದ್ಧತಿಯಡಿ ಎನ್.ಎಫ್.ಎಸ್.ಎ ಮತ್ತು ಅನ್ನಭಾಗ್ಯ ಯೋಜನೆಗಳಡಿ ಮಾಹೆಯಾನ 10 ಕೆ.ಜಿ ಆಹಾರ ಧಾನ್ಯ ವಿತರಿಸಲಾಗುತ್ತಿದೆ. ಮೇ ಮತ್ತು ಜೂನ್ ತಿಂಗಳ ಆಹಾರ ಧಾನ್ಯ ವಿತರಣೆ ಮಾಡಲಾಗುತ್ತಿದ್ದು, ಪ್ರತಿ ಅಂತ್ಯೋದಯ ಪಡಿತರ ಚೀಟಿಗೆ 28 ಕೆ.ಜಿ ಅಕ್ಕಿ ಮತ್ತು 42 ಕೆ.ಜಿ ರಾಗಿ ಮತ್ತು ಆದ್ಯತಾ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ತಲಾ 4 ಕೆ.ಜಿ ಅಕ್ಕಿ ಮತ್ತು 6 ಕೆ.ಜಿ ರಾಗಿ ವಿತರಿಸಲಾಗುತ್ತದೆ. ಅನ್ನಭಾಗ್ಯ ಯೋಜನೆಗೆ ಸಂಬಂಧಿಸಿದ 2026 ರ ಮೇ ಮತ್ತು ಜೂನ್ ಮಾಹೆಗಳ ಆಹಾರಧಾನ್ಯ ಜೂನ್ -2026 ನೇ ಮಾಹೆಯಲ್ಲಿ ವಿತರಣೆ ಮಾಡಲಾಗುತ್ತದೆ. ಜಿಲ್ಲೆಯ ಎಲ್ಲಾ ಅರ್ಹ ಪಡಿತರ ಫಲಾ ನುಭವಿಗಳು ಹತ್ತಿರದ ನ್ಯಾಯಬೆಲೆ ಅಂಗಡಿಗೆ ತೆರಳಿ ನಿಯಮಾನುಸಾರ ಯೋಜನೆಯ ಸದು ಪಯೋಗಪಡೆದುಕೊಳ್ಳಲು ಎಂದು ಜಿಲ್ಲಾಧಿಕಾರಿ ಜಿ.ಪ್ರಭು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಿಂತಾಮಣಿಯಲ್ಲಿ ತಿಂಗಳ ಹಿರಿಯ ಕವಿಗಳ ಸ್ಮರಣಾ ಕಾರ್ಯಕ್ರಮ

ಚಿಂತಾಮಣಿ: ಕನ್ನಡ ಸಾಹಿತ್ಯ ವೇದಿಕೆ ಹಾಗೂ ಚುಟುಕು ಸಾಹಿತ್ಯ ಪರಿಷತ್ ತಿಂಗಳಲ್ಲಿ ಜನಿಸಿರುವ ಹಿರಿಯ ಕವಿಗಳ ಕವಿ ಸ್ಮರಣ ಕಾರ್ಯಕ್ರಮವನ್ನು ವೇದಿಕೆ ಕಚೇರಿಯಲ್ಲಿ ಆಚರಿಸಲಾಯಿತು.

ನಗರದ ಕಸಾವೇ ಮತ್ತು ಚುಸಾಪ ಕಚೇರಿಯಲ್ಲಿ ನಡೆದ ತಿಂಗಳ ಕವಿ ಸ್ಮರಣಾ ಕಾರ್ಯಕ್ರಮದಲ್ಲಿ ವೇದಿಕೆ ಅಧ್ಯಕ್ಷ ಕಾಗತಿ ವೆಂಕಟರತ್ನಂ ಮಾತನಾಡಿ, ಹತ್ತಾರು ವರ್ಷಗಳಿಂದ ಈ ಕಾರ್ಯಕ್ರಮವು ನಿರಂತರವಾಗಿ ನಡೆಯುತ್ತಿದ್ದು, ಈ ಕಾರ್ಯಕ್ರಮ ಒಂದು ಪವಿತ್ರವಾದ ಕಾರ್ಯಕ್ರಮವೇ ಆಗಿದೆ. ಆಯಾ ತಿಂಗಳಿನಲ್ಲಿ ಜನಿಸಿದ ಕವಿಗಳ ಜನನ ಬದುಕು ಬರಹಗಳ ವಿಶ್ಲೇಷಣೆ ಮತ್ತು ಕವಿಗಳ ಸ್ಮರಣೆ ಮಾಡುವುದು ಒಳ್ಳೆಯ ವಿಚಾರವಾಗಿದ್ದು, ಇದರಿಂದ ಕನ್ನಡ ಭಾಷೆ ಬೆಳೆಯಲು ಪೂರಕ ವಾತಾವರಣ ನಿರ್ಮಾಣವಾಗಲಿದೆ ಎಂದರು. ತಾ ಕಸಾಪ ಅಧ್ಯಕ್ಷ ಎನ್. ವಿ. ಶ್ರೀನಿವಾಸನ್ ಅಧ್ಯಕ್ಷತೆ ವಹಿಸಿದ್ದರು. ನಿವೃತ್ತ ಶಿಕ್ಷಕ ಡಾ. ವೆಂಕಟೇಶಪ್ಪ ಮಾತನಾಡಿದರು. ಕಾರುಣ್ಯ ಪ್ರಾರ್ಥಿಸಿದರು. ಪೂರ್ವಿಕಾ ಭಕ್ತಿಗೀತೆ ಹಾಡಿದರು. ಪರಿಣಿತಿ ವಂದಿಸಿದರು.

ಉಪಚುನಾವಣೆ ಗೆಲವು | ಜಿಲ್ಲಾ ಎಸ್ಸಿ ಘಟಕದ ಅಧ್ಯಕ್ಷ ಜಯದೇವ್ ನೇತೃತ್ವ

ಕೋಲಾರದಲ್ಲಿ ಕಾಂಗ್ರೆಸ್ ವಿಜಯೋತ್ಸವ



ದಾವಣಗೆರೆ, ಬಾಗಲಕೋಟೆ ವಿಧಾನಸಭಾ ಉಪಚುನಾವಣೆಯಲ್ಲಿ ಕಾಂಗ್ರೆಸ್ ಜಯಭೇರಿ ಬಾರಿಸಿರುವ ಹಿನ್ನೆಲೆಯಲ್ಲಿ ಪಕ್ಷದ ಕಾರ್ಯಕರ್ತರು ಜಿಲ್ಲಾ ಎಸ್ಸಿ ಘಟಕದ ಅಧ್ಯಕ್ಷ ಕೆ.ಜಯದೇವ್ ನೇತೃತ್ವದಲ್ಲಿ ಪಕ್ಷದ ಕಚೇರಿ ಮುಂದೆ ಸಿಹಿ ಹಂಚಿ ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದರು.

• **ಕನ್ನಡಪ್ರಭ ವಾರ್ತೆ** ಕೋಲಾರ

ದಾವಣಗೆರೆ, ಬಾಗಲಕೋಟೆ ಉಪಚು ನಾವಣೆ ಹಾಗೂ ಕೇರಳದಲ್ಲಿ ಕಾಂಗ್ರೆಸ್ ಜಯಭೇರಿ ಹಿನ್ನೆಲೆಯಲ್ಲಿ ಪಕ್ಷದ ಕಾರ್ಯ ಕರ್ತರು ಜಿಲ್ಲಾ ಎಸ್ಸಿಘಟಕದ ಅಧ್ಯಕ್ಷ ಕೆ. ಜಯದೇವ್ ನೇತೃತ್ವದಲ್ಲಿ ಪಕ್ಷದ ಕಚೇರಿ ಮುಂದೆ ಸಿಹಿ ಹಂಚಿ ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದರು.

ವಳಿಕ ಜಯದೇವ್ ಮಾತನಾಡಿ, ಚುನಾವಣಾ ಸಮೀಕ್ಷೆಗಳು ಎರಡೂ ಕಡೆ ಕಾಂಗ್ರೆಸ್ ಸೋಲಿನ ಸುದ್ದಿ ನೀಡಿದ್ದವು, ಆದರೆ ಎರಡೂ ಕಡೆ ಪಕ್ಷ ಗೆದ್ದಿದೆ, ಅಲ್ಲಿನ ಮತದಾರ ಪಕ್ಷದ ಕೈಬಿಟ್ಟಿಲ್ಲ. ಪಕ್ಷದ ಗೆಲುವಿಗೆ ರಾಜ್ಯದಲ್ಲಿನ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್‌ನೇತೃತ್ವದ ಸರ್ಕಾರ ಜಾರಿಗೆ ತಂದ ಗ್ಯಾರಂಟಿಗಳೇ ಕಾರಣವಾಗಿದ್ದು, ಜನರ ಆರ್ಥಿಕ ಸ್ಥಿತಿ ಸುಧಾರಣೆಗೆ ನಮ್ಮ ಸರ್ಕಾರ ಜಾರಿಗೆ ತಂದಿರುವ ಯೋಜನೆಗಳಿಗೆ ಸಿಕ್ಕಿರುವ ಗೌರವ ಈ ಫಲಿತಾಂಶ ಎಂದರು.

ಎರಡೂ ಕ್ಷೇತ್ರಗಳಲ್ಲಿ ಪಕ್ಷದ ಗೆಲುವಿಗೆ ಸಿಎಂ, ಡಿಸಿಎಂ ಮಾರ್ಗದರ್ಶನದಲ್ಲಿ ಶ್ರಮಿಸಿದ ಎಲ್ಲಾ ಮುಖಂಡರು, ಸಚಿವರು, ಶಾಸಕರು, ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು, ಕಾರ್ಯಕರ್ತರಿಗೆ ಧನ್ಯವಾದ ಸಲ್ಲಿಸಿದರು. ಕೇರಳದಲ್ಲಿ ಸೋನಿಯಾಗಾಂಧಿ, ರಾಹುಲ್‌ಗಾಂಧಿ, ಪ್ರಿಯಾಂಕಾಗಾಂಧಿಮಾರ್ಗದರ್ಶನದಲ್ಲಿ ಅಲ್ಲಿ ಪಕ್ಷ ಅಧಿಕಾರಕ್ಕೆ ಬಂದಿದ್ದು, ಸಂತಸದ ವಿಷಯವಾಗಿದೆ ಎಂದು ತಿಳಿಸಿದರು.

ವಿಜಯೋತ್ಸವದಲ್ಲಿ ನಗರಸಭೆ ಮಾಜಿ ಉಪಾಧ್ಯಕ್ಷ ಎಸ್.ಆರ್. ಮುರಳಿಗೌಡ, ಮುಖಂಡರಾದ ಲಾಲ್‌ಬಹದ್ದೂರು ಶಾಸ್ತ್ರಿ, ನಾಗರಾಜ್, ಶ್ರೀನಿವಾಸ್, ಮಂಜುನಾಥ್, ನಾರಾಯಣಸ್ವಾಮಿ, ವೆಂಕಟಪತೆಪ್ಪ, ಗೋವಿಂದರಾಜು, ಫ್ಯಾರೇಜಾನ್ ಇದ್ದರು.

ಗೆಲವು | ಡೂಮ್ ಲೈಟ್ ಸರ್ಕಲ್‌ನಲ್ಲಿ ಪಟಾಕಿ ಸಿಡಿಸಿ ಸಂಭ್ರಮ

ಬಿಜೆಪಿ ಕಾರ್ಯಕರ್ತರ ವಿಜಯೋತ್ಸವ



ವಿಧಾನಸಭೆ ಚುನಾವಣೆಗಳಲ್ಲಿ ಎನ್.ಡಿ.ಎ. ಮೈತ್ರಿಕೂಟ ಭರ್ಜರಿ ಜಯ ದಾಖಲಿಸಿದ ಹಿನ್ನೆಲೆಯಲ್ಲಿ ಜಿಲ್ಲಾ ಬಿಜೆಪಿ ಪಕ್ಷದ ಮುಖಂಡರು ಕೋಲಾರದ ಡೂಮ್ ಲೈಟ್ ಸರ್ಕಲ್‌ನಲ್ಲಿ ವಿಜಯೋತ್ಸವ ಆಚರಿಸಿದರು.

• **ಕನ್ನಡಪ್ರಭ ವಾರ್ತೆ** ಕೋಲಾರ

ಪಶ್ಚಿಮ ಬಂಗಾಳ, ಪುದುಚೇರಿ, ಅಸ್ಸಾಂ ರಾಜ್ಯಗಳ ವಿಧಾನಸಭೆ ಚುನಾವಣೆಯಲ್ಲಿ ಎನ್.ಡಿ.ಎ. ಮೈತ್ರಿಕೂಟ ಭರ್ಜರಿ ಜಯ ದಾಖಲಿಸಿದ ಹಿನ್ನೆಲೆಯಲ್ಲಿ ಜಿಲ್ಲಾ ಬಿಜೆಪಿ ಪಕ್ಷದ ಮುಖಂಡರು ನಗರದ ಡೂಮ್ ಲೈಟ್ ಸರ್ಕಲ್‌ನಲ್ಲಿ ವಿಜಯೋತ್ಸವ ಆಚರಿಸಿದರು.

ನಗರದ ವಿವೇಕಾನಂದ ವೃತ್ತದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು, ಪಕ್ಷದ ಪರ ಘೋಷಣೆ ಕೂಗಿದ ಕಾರ್ಯಕರ್ತರು ತಮಟೆ ಸದ್ದಿಗೆ ನೃತ್ಯ ಮಾಡುವ ಮೂಲಕ ಸಂಭ್ರಮಾಚರಣೆ ಮಾಡಿದರು. ಮಾಜಿ ಸಂಸದ ಎಸ್. ಮುನಿಸ್ವಾಮಿ ಮಾತನಾಡಿ, ಬಾಂಗ್ಲಾ ಗಡಿಯ ಮೂಲಕ ಪಶ್ಚಿಮ ಬಂಗಾಳ ರಾಜ್ಯದೊಳಗೆ ಬರುವ ನುಸುಳುಕೋರರನ್ನು ಓಟ್ ಬ್ಯಾಂಕ್‌ನ್ನಾಗಿ ಮಾಡಿಕೊಳ್ಳುವ ಮೂಲಕ ದೇಶ ಹಾಗೂ ರಾಜ್ಯದ ಜನರನ್ನು ಕಡೆಗಣಿಸಲಾಗಿತ್ತು ಎಂದರು.

ವಿಜಯೋತ್ಸವದಲ್ಲಿ ಕೆಜಿಎಫ್ ಮಾಜಿ ಶಾಸಕ ವೈ.ಸಂಪಂಗಿ, ಬಿಜೆಪಿ ಜಿಲ್ಲಾಧ್ಯಕ್ಷ ಓಂಶಕ್ತಿ ಚಲಪತಿ, ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯೆ ಮಮತಾ ಗೌಡ, ಪ್ರವೀಣ್ ಗೌಡ, ಮಾಗೇರಿ ನಾರಾಯಣಸ್ವಾಮಿ, ವಿಜಯ್ ಕುಮಾರ್, ಕೆಂಬೋಡಿ ನಾರಾಯಣಸ್ವಾಮಿ, ಗಾಂಧಿನಗರ ವೆಂಕಟೇಶ್ ಇದ್ದರು.

ಬಂಗಾರಪೇಟೆಯಲ್ಲಿ ಶ್ರೀದ್ರೌಪದಮ್ಮ ಧರ್ಮರಾಯಸ್ವಾಮಿ ಆಕರ್ಷಕ ಕರಗ

ಪಟ್ಟಣದಲ್ಲಿ ಭಕ್ತರ ಮನ ಸೆಳೆದ ಒನಕೆ ಕರಗ ಮಹೋತ್ಸವ

• **ಕನ್ನಡಪ್ರಭ ವಾರ್ತೆ,** ಬಂಗಾರಪೇಟೆ:

ಪಟ್ಟಣದ ಪುರಾಣ ಪ್ರಸಿದ್ಧ 80ನೇ ಶ್ರೀ ದೌಪದಮ್ಮ ಧರ್ಮರಾಯಸ್ವಾಮಿ ದೇವಾಲಯದ ಹೂವಿನ ಕರಗ ಮಹೋತ್ಸವದ ಅಂಗವಾಗಿ ನಡೆದ ವಸಂತೋತ್ಸವದ ಒನಕೆ ಕರಗ ನೃತ್ಯ ಭಕ್ತರ ಮನ ಸೆಳೆಯಿತು.



ಕಾರಹಳ್ಳಿ ಗ್ರಾಮದ ವಗ್ನಿಕುಲಸ್ಥರು ಹಾಗೂ ದೇವಾಲಯ ಸಮಿತಿಯಿಂದ ನಡೆದ ವಸಂತೋತ್ಸವ ಕಾರ್ಯಕ್ರಮದಲ್ಲಿ ಒನಕೆ ಮೇಲೆ ನೀರು ತುಂಬಿದ ಪಾತ್ರೆಯ ನ್ನಿಟ್ಟು ಒನಕೆಯನ್ನು ತಲೆಯ ಮೇಲಿಟ್ಟುಕೊಂಡು ಅದರಲ್ಲಿನ ನೀರನ್ನು ನೃತ್ಯ ಪ್ರದರ್ಶನದ ಮೂಲಕ ಹೊರಚೆಲ್ಲುವ ಕರಗದ ಪೂಜಾರಿ ಬೇತಮಂಗಲದ ಎನ್. ಕೃಷ್ಣಮೂರ್ತಿ ಹಾಗೂ ಇವರ ಪುತ್ರ ಪ್ರಜ್ವಲ್ (ಅಚ್ಚು) ಚಾತುರ್ಯಕ್ಕೆ ಜನ ತಲೆದೂಗಿದರು.

ವಿವಿಧ ಭಂಗಿಗಳಲ್ಲಿ ನರ್ತನ: ಒನಕೆಯನ್ನು ಕೈಯಿಂದ ಹಿಡಿಯದೇ ಒಂದು ತುದಿಯ ಮೇಲೆ ನೀರು ತುಂಬಿದ ಪಾತ್ರೆಯಿಟ್ಟು, ಮತ್ತೊಂದು ತುದಿಯನ್ನು ತಲೆಮೇಲಿಟ್ಟುಕೊಂಡು ನರ್ತಿಸುವ ಸಾಹಸಕ್ಕೆ ಜನರು ಬೆರಗಾದರು. ತಮಟೆ ವಾದ್ಯಕ್ಕೆ ತಕ್ಕಂತೆ ವಿವಿಧ ಭಂಗಿಗಳಲ್ಲಿ ನರ್ತಿಸಿ ನೆರೆದಿದ್ದವರನ್ನು ಮನರಂಜಿಸಿದರು.

ವಕುಲದ ಯಜಮಾನ ಸಿ. ನಾರಾಯಣಸ್ವಾಮಿ ಪುತ್ರ ಕುಮರೇಶ್, ಗೌಡ ರಾದ ಕೆ.ಪಿ. ಚಿನ್ನರಾಜು, ಶ್ರೀ ಧರ್ಮ ರಾಯಸ್ವಾಮಿ ದೇವಾಲಯ ಸಮಿತಿ ಅಧ್ಯಕ್ಷ ಸಿ.ಆರ್. ಮೂರ್ತಿ, ಉಪಾಧ್ಯಕ್ಷ ಕಾರಹಳ್ಳಿ ಚಿನ್ನಿವೆಂಕಟೇಶ್, ಜೆ. ಜಯಕುಮಾರ್, ಪ್ರಧಾನ ಕಾರ್ಯದರ್ಶಿ ಕೆ.ಸಿ. ಗೋಪಾಲ್, ಜಂಟಿ ಕಾರ್ಯದರ್ಶಿ ಪಿ. ಅಮರೇಶ್, ಖಜಾಂಚಿ ಕುಮರೇಶ್ ನಾಯಕರ್, ಸಂಘಟನಾ ಕಾರ್ಯದರ್ಶಿ ಜಿ. ಮುರುಗೇಶ್, ನಿರ್ದೇಶಕ ಎಂ. ನಾರಾಯಣಸ್ವಾಮಿ, ಟಿ. ಶ್ರೀನಿವಾಸ್ ಇತರರು ಇದ್ದರು.

ಸುದ್ದಿ ಸಿಂಚನ

ಗುಡಿಬಂಡೆಯಲ್ಲಿ ಬಿಜೆಪಿ ವಿಜಯೋತ್ಸವ

ಗುಡಿಬಂಡೆ: ಪಂಚರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಸ್ಸಾಂ, ಪಶ್ಚಿಮ ಬಂಗಾಳ ಹಾಗೂ ಪುದುಚೇರಿಯಲ್ಲಿ ಅಭೂತಪೂರ್ವ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಬಿಜೆಪಿ ವತಿಯಿಂದ ಪಟಾಕಿ ಸಿಡಿಸಿ, ಸಿಹಿ ಹಂಚುವ ಮೂಲಕ ಸಂಭ್ರಮಾಚರಿಸಲಾಯಿತು.ಈ ವೇಳೆ ಬಿಜೆಪಿ ಮಂಡಲಾಧ್ಯಕ್ಷ ಗಂಗಿರೆಡ್ಡಿ ಮಾತನಾಡಿ, ಬಿಜೆಪಿ ಅಭಿವೃದ್ಧಿ ಕೆಲಸಗಳನ್ನು ಮೆಚ್ಚಿದ ಜನತೆ ಇಂದು ಬಿಜೆಪಿ ಪಕ್ಷದತ್ತ ವಾಲುತ್ತಿದ್ದಾರೆ. ಮೋದಿ ನೇತೃತ್ವದ ಸರ್ಕಾರ ಜನಪರ ಕೆಲಸಗಳನ್ನು ಮಾಡುತ್ತಿದ್ದು, ಇಡೀ ದೇಶದ ಜನತೆ ಮೋದಿ ಪರ ಇದ್ದಾರೆ. ಅದಕ್ಕೆ ಸಾಕ್ಷಿ ಎಂಬಂತೆ ಪಂಚ ರಾಜ್ಯಗಳ ಚುನಾವಣೆಯಲ್ಲಿ ಮೂರು ರಾಜ್ಯಗಳಲ್ಲಿ ಬಿಜೆಪಿ ಅಭೂತಪೂರ್ವ ಸಾಧನೆ ಮಾಡಿದೆ. ದೇಶದಲ್ಲಿ ಮುಂದಿನ ಚುನಾವಣೆಗಳಲ್ಲಿ ಸಹ ಬಿಜೆಪಿ ಗೆಲುವು ಸಾಧಿಸಲಿದ್ದು, ಇಡೀ ಭಾರತ ಕೇಸರಿಮಯವಾಗಲಿದೆ ಎಂದರು. ಈ ವೇಳೆ ಬಿಜೆಪಿತಾಲೂಕು ಪ್ರಧಾನ ಕಾರ್ಯದರ್ಶಿ ಅಂಬರೀಶ್, ಮಹಿಳಾ ಮೋರ್ಚಾ ಅಧ್ಯಕ್ಷೆ ಜಿ ವಿ ಲಕ್ಷ್ಮೀ ವೇಣುಗೋಪಾಲ್, ಪ್ರಧಾನ ಕಾರ್ಯದರ್ಶಿ ಅರುಣ, ಜ್ಯೋತಿ, ಭಾರತಿ, ಪ್ರಧಾನ ಕಾರ್ಯದರ್ಶಿ ಗಗನ, ನಗರ ಘಟಕದ ರಾಜಮ್ಮ, ಯುವ ಮೋರ್ಚಾ ಅಧ್ಯಕ್ಷ, ನರಸಿಂಹಮೂರ್ತಿ, ಮಂಜುಳಾ ಸಿಂಗ್, ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ಬೀಚಗಾನಹಳ್ಳಿ ಸುರೇಶ್, ರೈತ ಮೋರ್ಚಾ ಅಧ್ಯಕ್ಷ ಮುರಳಿ, ಪ್ರಧಾನ ಕಾರ್ಯದರ್ಶಿ ಅರುಣ್ ರೆಡ್ಡಿ, ಎಸ್ ಸಿ ಮೋರ್ಚಾ ಅಧ್ಯಕ್ಷ ಕಾಟನಹಳ್ಳಿ ನಾಗೇಶ್, ಪ್ರೆಸ್ ಶಿವಪ್ಪ ಇದ್ದರು.

ಬಂಗಾರಪೇಟೆಯಲ್ಲಿ ಬಿಜೆಪಿ ಸಂಭ್ರಮಾಚರಣೆ

ಬಂಗಾರಪೇಟೆ: ಪಂಚ ರಾಜ್ಯಗಳ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಮೂರು ರಾಜ್ಯಗಳಲ್ಲಿ ಗೆಲುವು ಸಾಧಿಸುವ ಮೂಲಕ ವಿಜಯ ಪತಾಕೆ ಬಾರಿಸಿ ವಿಪಕ್ಷಗಳಿಗೆ ಭವಿಷ್ಯದಲ್ಲಿ ನೆಲೆ ಇಲ್ಲ ಎಂಬುದನ್ನು ತೋರಿಸಿದೆ ಎಂದು ಬಿಜೆಪಿ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚುವ ಮೂಲಕ ವಿಜಯೋತ್ಸವ ಆಚರಿಸಿದರು. ನಗರದ ಕುವೆಂಪು ವೃತ್ತದಲ್ಲಿ ಹಮ್ಮಿಕೊಂಡಿದ್ದ ಸಂಭ್ರಮಾಚರಣೆ ಮಾಡಿ ದೇಶದಲ್ಲಿ ಬಹುತೇಕ ರಾಜ್ಯಗಳಲ್ಲಿ ಬಿಜೆಪಿ ಅಧಿಪತ್ಯ ಸಾಧಿಸಿ ಅಧಿಕಾರದಲ್ಲಿದೆ. ಈಗ ಐದು ರಾಜ್ಯಗಳ ಚುನಾವಣೆ ಫಲಿತಾಂಶ ಸಹ ಬಿಜೆಪಿ ಪರ ಜನತೆ ತೀರ್ಪು ನೀಡಿದ್ದಾರೆ. ಇದರಿಂದ ದೇಶದಲ್ಲಿ ಬಿಜೆಪಿಯೇ ಜನತೆಗೆ ಪರ್ಯಾಯ ಶಕ್ತಿಯಾಗಿ ರೂಪುಗೊಂಡಿದೆ ಎಂಬುದನ್ನು ತೋರಿಸಿದ್ದಾರೆಂದು ಪುರಸಭೆ ಮಾಜಿ ಸದಸ್ಯ ಕಪಾಲಿಶಂಕರ್ ಹೇಳಿದರು. ಈ ವೇಳೆ ಗ್ರಾ.ಪಂ ಮಾಜಿ ಉಪಾಧ್ಯಕ್ಷ ಜೀವನ್ ರೆಡ್ಡಿ, ರೈತ ಮೋರ್ಚಾ ಅಧ್ಯಕ್ಷ ಚಂದ್ರು, ದೇಶಿಹಳ್ಳಿ ಶ್ರೀನಿವಾಸ, ಚೆನ್ನಕೃಷ್ಣ, ನಾರಾಯಣಸ್ವಾಮಿ, ಅಮರೇಶ್, ಕುಂಬಾರಪಾಳ್ಯ ಮಣಿ, ಸುಕುಮಾರ್, ಗುಣ, ದೇಶಿಹಳ್ಳಿ ಬಾಲಕೃಷ್ಣ, ನಾಗೇಂದ್ರ, ನವೀದ್ ಮುಂತಾದವರು ಹಾಜರಿದ್ದರು.

ಕ್ಯಾಸಂಬಳ್ಳಿಯಲ್ಲಿ ಅಕ್ರಮ ಕ್ಲಿನಿಕ್ ಮೇಲೆ ದಾಳಿ: ದೂರು ದಾಖಲು

ಬೇತಮಂಗಲ: ಕ್ಯಾಸಂಬಳ್ಳಿಯಲ್ಲಿ ಅನಧಿಕೃತವಾಗಿ ರೋಗಿಗಳಿಗೆ ಚಿಕಿತ್ಸೆ ನೀಡುತ್ತಿದ್ದ ಶ್ರೀ ವತ್ಸಲ ಸಮುದಾಯ ಆರೋಗ್ಯ ಕೇಂದ್ರದ ವಿರುದ್ಧ ಪ್ರಬುದ್ಧ ಪ್ರಜಾ ವೇದಿಕೆ ಸಂಘಟನೆಯ ಅಧ್ಯಕ್ಷ ಶ್ರೀನಾಥ್ ನಸ್ತಿಕ್ ಕ್ಯಾಸಂಬಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.ಕ್ಯಾಸಂಬಳ್ಳಿಯಲ್ಲಿ ಕಳೆದ ಹಲವು ದಿನದಿಂದ ಆರೋಗ್ಯ ಕೇಂದ್ರವು ಆರೋಗ್ಯ ಇಲಾಖೆಯಾಗಲಿ ಅಥವಾ ಸ್ಥಳೀಯ ಗ್ರಾಪಂನಿಂದಾಗಲಿ ಪರವಾನಗಿ ಪಡೆಯದೆ ಅಕ್ರಮವಾಗಿ ನಡೆಯುತ್ತಿತ್ತು ಎನ್ನಲಾಗಿದೆ. ಈ ಬಗ್ಗೆ ಖಚಿತ ಮಾಹಿತಿ ಪಡೆದ ಪ್ರಬುದ್ಧ ಪ್ರಜಾ ವೇದಿಕೆಯ ಪದಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದಾಗ, ಕೇಂದ್ರದ ಅಕ್ರಮ ವ್ಯವಹಾರ ಬೆಳಕಿಗೆ ಬಂದಿದೆ. ಸಂಘಟನೆಯ ಪದಾಧಿಕಾರಿಗಳು ದಾಖಲೆಗಳ ಬಗ್ಗೆ ವೈದ್ಯರನ್ನು ಪ್ರಶ್ನಿಸಲು ಮುಂದಾದಾಗ, ವೈದ್ಯರು ಕೇಂದ್ರಕ್ಕೆ ಬೀಗ ಹಾಕಿ ಸ್ಥಳದಿಂದ ಪರಾರಿಯಾಗಲು ಯತ್ನಿಸಿದ್ದಾರೆ. ತಕ್ಷಣ ವೈದ್ಯನನ್ನು ಹಿಡಿದು, ಪೊಲೀಸರಿಗೆ ಒಪ್ಪಿಸಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.



ವಿವಿಧ ರಾಜ್ಯಗಳಲ್ಲಿ ಬಿಜೆಪಿ ಜಯ ಸಾಧಿಸಿದ್ದಕ್ಕಾಗಿ ಬೇತಮಂಗಲದ ಸುಂದರಪಾಳ್ಯದಲ್ಲಿ ವಿಜಯೋತ್ಸವ ಆಚರಿಸಲಾಯಿತು. ಬಿಜೆಪಿ ಗ್ರಾಮಾಂತರ ಘಟಕದ ಅಧ್ಯಕ್ಷ ಲಕ್ಷ್ಮೀ ನಾರಾಯಣ ಶರ್ಮಾ ನೇತೃತ್ವದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂತಸ ವ್ಯಕ್ತಪಡಿಸಿದರು



ಪಂಚರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಸ್ಸಾಂ, ಪಶ್ಚಿಮ ಬಂಗಾಳ ಹಾಗೂ ಪುದುಚೇರಿಯಲ್ಲಿ ಅಭೂತಪೂರ್ವ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಗುಡಿಬಂಡೆಯಲ್ಲಿ ಬಿಜೆಪಿ ವತಿಯಿಂದ ಪಟಾಕಿ ಸಿಡಿಸಿ, ಸಿಹಿ ಹಂಚುವ ಮೂಲಕ ಸಂಭ್ರಮಾಚರಿಸಲಾಯಿತು.



ಬಂಗಾರಪೇಟೆ ನಗರದಲ್ಲಿ ಬಿಜೆಪಿ ಕಾರ್ಯಕರ್ತರು ಮೂರು ರಾಜ್ಯಗಳಲ್ಲಿ ಪಕ್ಷ ಗೆಲುವು ಸಾಧಿಸಿರುವುದಕ್ಕೆ ವಿಜಯೋತ್ಸವ ಆಚರಿಸಿದರು. ಕಪಾಲಿಶಂಕರ್, ಜೀವನ್ ರೆಡ್ಡಿ, ರೈತ ಮೋರ್ಚಾ ಅಧ್ಯಕ್ಷ ಚಂದ್ರು, ದೇಶಿಹಳ್ಳಿ ಶ್ರೀನಿವಾಸ, ಚೆನ್ನಕೃಷ್ಣ, ನಾರಾಯಣಸ್ವಾಮಿ ಇದ್ದರು.

ಕೋಲಾರದಲ್ಲಿ ಭೂಮಾಪಕರ ಪ್ರತಿಭಟನಾ ರ್‍ಯಾಲಿ

ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹ | ಮೆಕ್ಕೆ ವೃತ್ತದಲ್ಲಿ ಮಾನವ ಸರಪಳಿ | ಜಿಲ್ಲಾಡಳಿತ ಭವನಕ್ಕೆ ಕಾಲ್ನಡಿಗೆ ಜಾಥಾ | ಡಿಸಿ ಕಚೇರಿ ಎದುರು ಪ್ರತಿಭಟನೆ

• **ಕನ್ನಡಪ್ರಭ ವಾರ್ತೆ** ಕೋಲಾರ

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅಖಿಲ ಕರ್ನಾಟಕ ಸರ್ಕಾರಿ ಪರವಾನಗಿ ಭೂ ಮಾಪಕರ ಸಂಘ ನಗರದ ಬಂಗಾರಪೇಟೆ ವೃತ್ತದ ಅಂಬೇಡ್ಕರ್ ಪ್ರತಿಮೆಗೆ, ಎಂಜಿ ರಸ್ತೆಯ ಗಾಂಧಿ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಮೆಕ್ಕೆ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ, ಜಿಲ್ಲಾಡಳಿತ ಭವನದವರೆಗೆ ಕಾಲ್ನಡಿಗೆ ಜಾಥಾ ಮೂಲಕ ನಗರದ ಹೊವಲಯದ ಡಿಸಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿತು.

ರಾಜ್ಯದ ನಾನಾ ಭಾಗಗಳಿಂದ ಆಗಮಿಸಿದ್ದ ಪರವಾನಗಿ ಭೂ ಮಾಪಕರು ಪ್ರತಿಭಟನೆ ರ್‍ಯಾಲಿ ನಡೆಸಿ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಹಾಗೂ ಭೂ ದಾಖಲೆಗಳ ಉಪನಿರ್ದೇಶಕ ಬಿ.ಕೆ. ಸಂಜಯ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಭೂ ಮಾಪಕರ ಸಂಘದ ರಾಜ್ಯ ಗೌರವಾಧ್ಯಕ್ಷ ಕೆ.ಪಿ. ಭಾರ್ಗವ ಮಾತನಾಡಿ, ಸರ್ಕಾರಿ ಪರವಾನಗಿ ಭೂಮಾಪಕರು ಸುಮಾರು 23 ವರ್ಷದಿಂದ ರೈತರು ಮತ್ತು ಸರ್ಕಾರದ ಕೆಲಸ ನಿರ್ವಹಿಸುತ್ತಿದ್ದು, ಇಲಾಖೆಗೆ ಹೆಸರು ತರುವಲ್ಲಿ ಯಶಸ್ವಿಯಾಗಿದ್ದೇವೆ. ಈಗ ವಯೋಮಿತಿ ಕಳೆದುಕೊಂಡಿದ್ದು, ಭೂಮಾಪಕರ ಕೆಲಸ ಬಿಟ್ಟು, ಬೇರೆ ಕೆಲಸ ನಿರ್ವಹಿಸಲು ಸಾಧ್ಯವಾಗದ ಪರಿಸ್ಥಿತಿಗೆ ಬಂದು ತಲುಪಿದ್ದೇವೆ. ನಮ್ಮ ಸೇವೆಯನ್ನು ಪರಿಗಣಿಸಿ, ಸರ್ಕಾರಿ ಭೂಮಾಪಕರ ಹುದ್ದೆಯಲ್ಲಿ ವಿಲೀನಗೊಳಿಸಬೇಕು, ಸಮಾನ ಕೆಲಸಕ್ಕೆ ಸಮಾನ ವೇತನ ನೀಡುವಂತೆ ಹಲವಾರು ಬಾರಿ ಮನವಿ ಮಾಡಿದ್ದರೂ ಸರ್ಕಾರ ನಮ್ಮ ಬೇಡಿಕೆಗೆ ಸ್ಪಂದಿಸುತ್ತಿಲ್ಲವೆಂದು ಬೇಸರ ವ್ಯಕ್ತಪಡಿಸಿದರು.



ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅಖಿಲ ಕರ್ನಾಟಕ ಸರ್ಕಾರಿ ಪರವಾನಗಿ ಭೂ ಮಾಪಕರ ಸಂಘ ಕೋಲಾರದ ಡಿಸಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ಡಿಸಿ ಡಾ.ಎಂ.ಆರ್.ರವಿ ಅವರಿಗೆ ಮನವಿ ಸಲ್ಲಿಸಿತು.

ಜೀತದಾಳುಗಳಿಗಿಂತ ಕಡೆ: ಇಲಾಖೆ ಮತ್ತು ಸರ್ಕಾರ ನಿಗದಿ ಮಾಡಿರುವ ಸೇವಾ ಶುಲ್ಕ ಅವೈಜ್ಞಾನಿಕವಾಗಿದ್ದು, ನಮ್ಮ ಸ್ಥಿತಿ ಜೀತದಾಳುಗಳ ಪರಿಸ್ಥಿತಿಗಿಂತ ಕನಿಷ್ಠವಾಗಿರುವುದರಿಂದನಾವುಕೆಲಸನಿರ್ವಹಿಸಲು, ಜೀವನ ನಡೆಸಲು ಆಗದೇ ಇರುವಂತಹ ಪರಿಸ್ಥಿತಿಗೆ ಬಂದಿದ್ದೇವೆ ಎಂದು ನುಡಿದರು.

ಸರ್ಕಾರ ದಿನ ಕಳೆದಂತೆ ಕೆಲಸದ ಒತ್ತಡ, ಜವಾಬ್ದಾರಿ ಹೆಚ್ಚಿಸುತ್ತಲೇ ಇದೆ. ಆದರೆ ಪರವಾನಗಿ ಭೂಮಾಪಕರಿಗೆ ತಿಂಗಳಿಗೆ ಸಂಬಳ, ಸವಲತ್ತು ಮಾತ್ರ ಶೂನ್ಯ, ಪೂರ್ಣ ಸ್ಕೆಚ್ ಆಗುವ ಕಡತಕ್ಕೆ 1200 ರು. ಮಾತ್ರ ನೀಡುತ್ತಿದೆ, ಶ್ರಮವಹಿಸಿ ಕೆಲಸ ಮಾಡಿ ಕಾರಣಾಂತರದಿಂದ ಸ್ಕೆಚ್ ಆಗದ ಕಡತಕ್ಕೆ ಕೇವಲ 360ರು. ಮಾತ್ರ ನೀಡಲಾಗುತ್ತಿದೆ. ಅದರಲ್ಲೂ ಇಲಾಖೆ ವಿಳಂಬವಾಗಿ ಹಣ ಪಾವತಿ ಮಾಡುತ್ತದೆ. ಸರ್ಕಾರ ಕೂಡಲೇ ಪರವಾನಗಿ ಭೂಮಾಪಕರನ್ನು ಸರ್ಕಾರಿ ಭೂ ಮಾಪಕನ್ನಾಗಿ ಕಾಯಂಗೊಳಿಸಿ ಸಮಾನ ಕೆಲಸ-ಸಮಾನ ವೇತನ ನೀಡಬೇಕು ಎಂದು ಒತ್ತಾಯಿಸಿದರು.

ಸೇವಾ ಭದ್ರತೆ ಇಲ್ಲ: ಪರವಾನಗಿ ಭೂ ಮಾಪಕರ ಸಂಘದ ಜಿಲ್ಲಾಧ್ಯಕ್ಷ ಕೆ. ಶಿವಾನಂದ ಮಾತನಾಡಿ, ಸರ್ಕಾರದ ಪರವಾನಗಿ ಪಡೆದು ಸೇವೆ ಸಲ್ಲಿಸುತ್ತಿರುವ ಭೂ ಮಾಪಕರಿಗೆ ಸೇವಾ ಭದ್ರತೆ ಇಲ್ಲ. ಸರ್ಕಾರಿ ಭೂ ಮಾಪಕರಂತೆ ಸಮಾನ ಕೆಲಸ ಮಾಡುತ್ತಿರುವ ನಮಗೆ ಸಮಾನ ವೇತನ ನೀಡಬೇಕು. ಸೇವೆ ಕಾಯಂ ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನಾ ರ್‍ಯಾಲಿಯಲ್ಲಿ ಅಖಿಲ ಕರ್ನಾಟಕ ಪರವಾನಗಿ ಭೂ ಮಾಪಕರ ಸಂಘದ ಉಪಾಧ್ಯಕ್ಷ ಪ್ರಸನ್ನಕುಮಾರ್, ಕಾರ್ಯದರ್ಶಿ ಸಿದ್ದರಾಜು, ಪದಾಧಿಕಾರಿಗಳಾದ ಷಣ್ಮುಗ, ದ್ವಾರಕೀಶ್, ಬಚ್ಚೇಗೌಡ, ರಾಜಣ್ಣ ತುಮಕೂರು ಅಧ್ಯಕ್ಷ ನಾಗೇಶ್, ಮೈಸೂರು ಅಧ್ಯಕ್ಷ ಪ್ರಾಣೇಶ್, ರಾಮನಗರ ಅಧ್ಯಕ್ಷ ನವಕೋಟಿ, ಬೆಂಗಳೂರು ನಗರ ಅಧ್ಯಕ್ಷ ವೆಂಕಟೇಶ್ ಮೂರ್ತಿ, ಬೆಂಗಳೂರು ಗ್ರಾಮಾಂತರ ವೆಂಕಟರೆಡ್ಡಿ, ವಿಜಯನಗರ ಅಧ್ಯಕ್ಷ ಮಹಲಿಂಗಪ್ಪ, ಶಿವಮೊಗ್ಗ ಅಧ್ಯಕ್ಷ ಶಶಿ, ಕೋಲಾರ ಜಿಲ್ಲಾ ಉಪಾಧ್ಯಕ್ಷ ನರಸಿಂಹಮೂರ್ತಿ, ತಾಲೂಕು ಅಧ್ಯಕ್ಷ ವಸಂತ್ ಕುಮಾರ್, ಮಾಲೂರು ಅಧ್ಯಕ್ಷ ಚೆಲುವಯ್ಯ ಸ್ವಾಮಿ, ಬಂಗಾರಪೇಟೆ ಅಧ್ಯಕ್ಷ ಪಾಂಡುರಂಗಯ್ಯ, ಮುಳಬಾಗಿಲು ಅಧ್ಯಕ್ಷ ಸೋಮಶೇಖರಯ್ಯ, ಶ್ರೀನಿವಾಸಪುರ ಅಧ್ಯಕ್ಷ ವೇಣು ಇದ್ದರು.

ಬಿಎಸ್‌ವೈ ಉತ್ಸವಕ್ಕೆ ಚಿಕ್ಕಬಳ್ಳಾಪುರದಿಂದ 10 ಸಾವಿರ ಜನ

ನೂರಕ್ಕೂ ಹೆಚ್ಚು ಬಸ್, ಕಾರುಗಳಲ್ಲಿ ಅಭಿಮಾನಿಗಳ ಪಯಣ: ಸೀಕಲ್ ರಾಮಚಂದ್ರಗೌಡ ಮಾಹಿತಿ

• **ಕನ್ನಡಪ್ರಭ ವಾರ್ತೆ,** ಚಿಕ್ಕಬಳ್ಳಾಪುರ:

ಚಿತ್ರದುರ್ಗದಲ್ಲಿ ಮೇ 9 ರಂದು ನಡೆಯುವ ಬಿ.ಎಸ್. ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲೆಯಿಂದ ನೂರಕ್ಕೂ ಅಧಿಕ ಬಸ್, ನೂರಾರು ಕಾರುಗಳು ಸೇರಿ ಸುಮಾರು ಹತ್ತು ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು, ಅಭಿಮಾನಿಗಳು ಭಾಗಿಯಾಗಲಿದ್ದಾರೆಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರಗೌಡ ತಿಳಿಸಿದರು.

ನಗರದಲ್ಲಿಮಂಗಳವಾರಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈಗಾಗಲೇ ವಿಧಾನಸಭಾ ಕ್ಷೇತ್ರ ಮಟ್ಟದಲ್ಲಿ ಈ ಕುರಿತು ಸಮಾಲೋಚನಾ ಸಭೆಗಳನ್ನು ನಡೆಸಲಾಗುತ್ತಿದ್ದು, ಯಡಿಯೂರಪ್ಪ ಅವರು ರಾಜಕೀಯ ಪ್ರವೇಶಿಸಿ 50 ವರ್ಷ ಆಗುತ್ತಿರುವ ಹಿನ್ನೆಲೆ ಅವರ ಕೊಡುಗೆಗಳನ್ನು ಸ್ಮರಿಸುವ ಹಾಗೂ ಅವರಿಗೆಅಭಿನಂದನೆಹೇಳುವಸಲುವಾಗಿ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದೇವೆ ಎಂದರು.



ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರಗೌಡ ಮಾತನಾಡಿದರು.

ಬಿಜೆಪಿ ರಾಜ್ಯ ಕಾರ್ಯದರ್ಶಿ ಸಿ. ಮುನಿರಾಜು ಮಾತನಾಡಿ, ಯಡಿಯೂರಪ್ಪ ಅವರು 50 ವರ್ಷ ರಾಜ್ಯವನ್ನು ಸುತ್ತಿದ್ದಾರೆ. ರೈತರಪರವಾಗಿಹೋರಾಡಿ, ದೀನದಲಿತರಿಗೆ ನ್ಯಾಯ ಒದಗಿಸಿ ಸಾಮಾಜಿಕ ನ್ಯಾಯಕ್ಕಾಗಿ ಹೋರಾಡಿದವರು. ಅವರ ಜೀವನ ಮತ್ತು ಸಮಾಜ ಸೇವೆ ಕುರಿತು ಅವರ ಅಭಿಮಾನೋತ್ಸವ ಆಚರಿಸಲು ತೀರ್ಮಾನಿಸಿದ್ದೇವೆ ಎಂದರು.

ಯಡಿಯೂರಪ್ಪ ಜನನಾಯಕ: ಬಿಜೆಪಿ ಮುಖಂಡ ಚಿಂತಾಮಣಿಯ ವೇಣುಗೋಪಾಲ್ ಮಾತನಾಡಿ, ಯಡಿಯೂರಪ್ಪಅವರುಜನನಾಯಕರು. ಪುರಸಭೆ ಸದಸ್ಯರಾಗಿ, ಅಧ್ಯಕ್ಷರಾಗಿ 1983 ರಿಂದ ಶಾಸಕರಾಗಿ, ಉಪ ಮುಖ್ಯಮಂತ್ರಿಯಾಗಿ, ನಾಲ್ಕು ಬಾರಿ ಮುಖ್ಯಮಂತ್ರಿಗಳಾಗಿ ಬಿಜೆಪಿಯನ್ನು ಕಟ್ಟಿ ಬೆಳೆಸಿದ ನಾಯಕರು. ಜನತಾ ದಳದಿಂದ ಕಾಂಗ್ರೆಸ್ಸಿಗೆ ಬಂದ ಸಿದ್ದರಾಮಯ್ಯನವರು ಬೇರೆಯವರ ಹೆಗಲ ಮೇಲೆ ಕುಳಿತು ಕಾರ್ಯಕ್ರಮ ಮಾಡಿಸಿಕೊಂಡಿದ್ದಾರೆ. ನಮ್ಮದು ಹಾಗಲ್ಲ, ಯಡಿಯೂರಪ್ಪನವರೇ ಕಟ್ಟಿ ಬೆಳೆಸಿದ ಪಕ್ಷ ಇದು. ಜನರ ಉತ್ಸವ ನಮ್ಮದು ಎಂದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಹೆಚ್. ಎಸ್. ಮುರಳೀಧರ್, ಮಧು ಸೂರ್ಯನಾರಾಯಣರೆಡ್ಡಿ, ಮಾಧ್ಯಮ ವಕ್ತಾರ ಮಧುಚಂದ್ರ, ಕಾರ್ಯದರ್ಶಿ ಆರ್.ಹೆಚ್.ಎನ್. ಅಶೋಕ್ ಕುಮಾರ್, ಮುಖಂಡರಾದ ಸೀಕಲ್ ಆನಂದ ಗೌಡ, ಲಕ್ಷ್ಮೀನಾರಾಯ ಣಗುಪ್ತ, ಎ.ವಿ ಬೈರೇಗೌಡ, ಸುಮಿತ್ರಮ್ಮ,ಪ್ರಭಾಕರ ರೆಡ್ಡಿ, ದೇವಸ್ಥಾನದಹೊಸಹಳ್ಳಿರಾಮಣ್ಣ, ತೇಜೆಂದ್ರಪಾಪು, ಕೋಡಿರ್ಲಪ್ಪ, ನರಸಿಂಹರಾಜು, ವೇಣುಮಾಧವ್, ಶಶಿಧರ್, ನರಸಪ್ಪ, ನಂದಿ ಮುನಿಸ್ವಾಮಿ ಮತ್ತಿತರರು ಇದ್ದರು.

ಬಿಜೆಪಿ ಗೆಲುವು ಮೋದಿ ದೂರದೃಷ್ಟಿ ನಾಯಕತ್ವದ ಫಲ: ಪುರುಷೋತ್ತಮ್

ಬೇತಮಂಗಲ: ಪಂಚ ರಾಜ್ಯಗಳ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟದ ಅಭೂತ ಪೂರ್ವ ಗೆಲುವು ಪ್ರಧಾನಿ ಮೋದಿ ದೂರದೃಷ್ಟಿಯ ನಾಯಕತ್ವ ಮತ್ತು ವಿಕಸಿತ ಭಾರತ ಪರಿವರ್ತನಾ ಪ್ರೇರಿತ ಕಾರ್ಯಸೂಚಿಯಲ್ಲಿ ಜನರು ಹೊಂದಿರುವ ನಿರಂತರ ನಂಬಿಕೆಯ ದೃಢೀಕೃತ ಫಲಿತಾಂಶ ಎಂದು ಟಿಎಪಿಸಿಎಂಎಸ್ ನಿರ್ದೇಶಕ ಪುರುಷೋತ್ತಮ್ ಹೇಳಿದರು. ಬೇತಮಂಗಲದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಜನರ ಆಕಾಂಕ್ಷೆ ಮತ್ತು ಸಬ್ ಖಾ ಸಾಥ್, ಸಬ್‌ಕಾ ವಿಕಾಸ್, ಸಬ್‌ಕಾ ವಿಶ್ವಾಸ್‌ನ ಮಾರ್ಗದರ್ಶಿ ತತ್ವಗಳ ನಡುವಿನ ಆಳವಾದ ಹೊಂದಾಣಿಕೆ ಪ್ರತಿಬಿಂಬಿಸುತ್ತದೆ. ಸಚಿವ ಅಮಿತ್ ಶಾ ಕಾರ್ಯತಂತ್ರದ ನಾಯಕತ್ವ-ರಾಷ್ಟ್ರೀಯ ಏಕತೆಗೆ ಅಚಲ ಬದ್ಧತೆಯು ಈ ಫಲಿತಾಂಶ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ದೇಶಾದ್ಯಂತ ಎನ್‌ಡಿಎ ಮೈತ್ರಿಕೂಟದ ವ್ಯಾಪ್ತಿ ಮತ್ತು ಸಾಂಸ್ಥಿಕ ಆಳ ಮತ್ತಷ್ಟು ಬಲಪಡಿಸುತ್ತದೆ ಎಂದರು.

42 ಮುಸ್ಲಿಂ ಬಾಲಕರ ಪತ್ತೆ ಬಗ್ಗೆ ತನಿಖೆಗೆ ಮುತಾಲಿಕ್ ಒತ್ತಾಯ

ಬಂಗಾರಪೇಟೆಯಲ್ಲಿ ಪತ್ತೆಯಾಗಿದ್ದ ಬಿಹಾರದ ಬಾಲಕರು



ಬಂಗಾರಪೇಟೆ ಪೊಲೀಸರಿಗೆ ಶ್ರೀರಾಮಸೇನೆ ಸಂಸ್ಥಾಪಕ ಮುತಾಲಿಕ್ ಮನವಿ ಸಲ್ಲಿಸಿದರು

ಬಂಗಾರಪೇಟೆ: ಬಿಹಾರದಿಂದ ಬಂದ ಅಪ್ರಾಪ್ತ 42 ಮುಸ್ಲಿಂ ಬಾಲಕರ ಪ್ರಕರಣವನ್ನು ಪೊಲೀಸರು ಗಂಭೀರವಾಗಿ ಪರಿಗಣಿಸಿ ತನಿಖೆ ನಡೆಸಬೇಕು ಎಂದು ಶ್ರೀರಾಮಸೇನೆ ಸಂಸ್ಥಾಪಕ ಪ್ರಮೋದ್ ಮುತಾಲಿಕ್ ಆಗ್ರಹಿಸಿದರು.

ಈ ಪ್ರಕರಣವನ್ನು ಒತ್ತಡಗಳಿಗೆ ಮಣಿಯದೆ ತನಿಖೆ ನಡೆಸಿ ಅವರ ಬಗ್ಗೆ ಸತ್ಯಾಂಶವನ್ನು ಬೆಳಕಿಗೆ ತರಬೇಕೆಂದು ಮುತಾಲಿಕ್ ಅವರು ನಗರದ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್‌ರವಿಕುಮಾರ್‌ಗೆ ಮನವಿ ಸಲ್ಲಿಸಿದರು.

ಅಪ್ರಾಪ್ತ ಬಾಲಕರ ಪ್ರಕರಣವನ್ನು ಮುಚ್ಚಿಹಾಕುವ ಪ್ರಯತ್ನ ನಡೆಯುತ್ತಿದೆ ಎಂಬ ಅನುಮಾನ ವ್ಯಕ್ತಪಡಿಸಿದ ಮುತಾಲಿಕ್, ಬಾಲಕರನ್ನು ಕರೆತಂದವರ ವಿರುದ್ಧ ಇನ್ನೂ ಪ್ರಕರಣ ದಾಖಲಿಸದಿರುವುದನ್ನು ಪ್ರಶ್ನಿಸಿದರು. ಅಪ್ರಾಪ್ತರು ಸಿಕ್ಕ ತಕ್ಷಣ ಮುಂದಿನ ಕಾನೂನು ಕ್ರಮ ನಡೆಯಬೇಕು. ಆದರೆ ಅವರನ್ನು ಕರೆತಂದ ಎಂಟು ಮಂದಿಯನ್ನು ಬಂಧಿಸಿಲ್ಲ. ರಾಜ್ಯ ಸರ್ಕಾರ ಹಾಗೂ ಸಂಬಂಧಿತ ಇಲಾಖೆಗಳು ಅಕ್ರಮದ ವಿರುದ್ಧ ಕೇಸ್ ದಾಖಲಿಸಬೇಕು ಎಂದು ಹೇಳಿದರು.

ಮುತಾಲಿಕ್ ನೀಡಿದ ದೂರನ್ನು ಸ್ವೀಕರಿಸಿದ ಪೊಲೀಸ್ ಇನ್ಸ್‌ಪೆಕ್ಟರ್ ರವಿಕುಮಾರ್‌ಅವರು ಕಾನೂನುಬದ್ಧ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಸುಂದರೇಶ್ ನರಗಲ್ ದೊಡ್ಡಬಳ್ಳಾಪುರ ಗುರೂಜಿ ಶ್ರೀನಿವಾಸ್, ರಮೇಶ್ ಗೌಡ ಸೇರಿ ವಿವಿಧ ಹಿಂದೂಪರ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು. ಶಾಂತ ಜೀವ ಜ್ಯೋತಿ ಜಿಲ್ಲಾ ಸಂಯೋಜಕ ಮಂಜುನಾಥ್ ಅವರು 112ಕ್ಕೆ ಕರೆ ಮಾಡಿ ಮಾಹಿತಿ ನೀಡಿದ ಹಿನ್ನೆಲೆಯಲ್ಲಿ 42 ಅಪ್ರಾಪ್ತ ಬಾಲಕರು ಪತ್ತೆಯಾಗಿದ್ದರು ಎಂಬುದನ್ನು ಇಲ್ಲಿ ಸ್ಮರಿಸಬಹುದು.

ಕಸಾಪ ಸಂಸ್ಥಾಪನಾ ದಿನ | ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರೊ. ಬಿ.ಕೆ. ರವಿ ಅಭಿಮತ

ಕನ್ನಡಕ್ಕೆ ನಾಲ್ವಡಿ ಕೃಷ್ಣರಾಜ ಒಡೆಯರ್ ಕೊಡುಗೆ ಅಪಾರ



ನಗರದ ಶಾಂತಿನಿಕೇತನ್ಸ್ ಪದವಿ ಪೂರ್ವ ಕಾಲೇಜಿನಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಪ್ರಬಂಧ ರಚನೆ ಸ್ಪರ್ಧೆಯ ವಿಜೇತರಿಗೆ ಬಹುಮಾನವನ್ನು ಗಣ್ಯರು ವಿತರಿಸಿದರು.

• **ಕನ್ನಡಪ್ರಭ ವಾರ್ತೆ,** ಚಿಕ್ಕಬಳ್ಳಾಪುರ

ಕನ್ನಡ ಭಾಷೆ, ಅಭಿವೃದ್ಧಿ ಮತ್ತು ಬೆಳವಣಿಗೆಗೆ ನಾಲ್ವಡಿ ಕೃಷ್ಣರಾಜ ಒಡೆಯರ್‌ಅವರ ಕೊಡುಗೆ ಅಪಾರ. ಕನ್ನಡ ಸಾಹಿತ್ಯ ಪರಿಷತ್ತು, ಮೈಸೂರು ವಿಶ್ವವಿದ್ಯಾನಿಲಯ, ಕೆಆರ್‌ಎಸ್, ಭದ್ರಾವತಿ ಕಾಗದ ಕಾರ್ಖಾನೆ, ಮೈಸೂರು ಬ್ಯಾಂಕ್, ಮಂಡ್ಯದಲ್ಲಿ ಸಕ್ಕರೆ ಕಾರ್ಖಾನೆ ಹೀಗೆ ಹತ್ತು, ಹಲವಾರು ಸಾಮಾಜಿಕ, ಶೈಕ್ಷಣಿಕ ಹಾಗೂ ಕೈಗಾರಿಕಾ ಬೆಳವಣಿಗೆಗೆ ಕೊಡುಗೆ ನೀಡಿದ್ದಾರೆ ಎಂದು ಬೆಂಗಳೂರು ಉತ್ತರ ವಿವಿ ಕುಲಪತಿ ಪ್ರೊ.ಬಿ.ಕೆ. ರವಿ ಸ್ಮರಿಸಿದರು. ನಗರದ ಶಾಂತಿನಿಕೇತನ್ಸ್ ಪದವಿ ಪೂರ್ವ ಕಾಲೇಜಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತು, ಚಿಕ್ಕಬಳ್ಳಾಪುರ ಜಿಲ್ಲೆ ಹಾಗೂ ತಾಲೂಕು ಸಹಯೋಗದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಉದ್ಘಾಟಿಸಿ ಮಾತನಾಡಿ, ವಯಸ್ಕರಿಗೆ ಶಿಕ್ಷಣ, ಮೀಸಲಾತಿ ಹೀಗೆ ಹಲವಾರು ಜನಪರ ಕಾರ್ಯಗಳ ಮೂಲಕ ಸಮಾಜದ ಅಭಿವೃದ್ಧಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್‌ಕಾರಣಕರ್ತರಾಗಿದ್ದಾರೆ ಎಂದರು.

ಕನ್ನಡ ನಾಡು ಹಲವು ಪ್ರಾಂತ್ಯಗಳಲ್ಲಿ ಹರಿದು ಹಂಚಿಹೋಗಿದ್ದಾಗ ನಾಲ್ವಡಿ ಕೃಷ್ಣರಾಜ ಒಡೆಯರ್‌ಅವರು ಮೈಸೂರು ಸಂಸ್ಥಾನವನ್ನು ಆಳುತ್ತಿದ್ದ ಕಾಲದಲ್ಲಿ ಸರ್.ಎಂ.ವಿಶ್ವೇಶ್ವರಯ್ಯ ಅವರು ಸ್ಥಾಪಿಸಿದ್ದ 'ಮೈಸೂರು ಸಂಪದಭ್ಯುದಯ ಸಮಾಜವು ಕನ್ನಡ ಭಾಷೆ, ಸಂಸ್ಕೃತಿ, ಸಾಹಿತ್ಯ ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಒಂದು ಸಂಸ್ಥೆಯ ಅಗತ್ಯವಿದೆ ಎಂದು ಅರಿತು 1915 ರ ಮೇ 5 ರಂದು ಲ್ಲಿ ಬೆಂಗಳೂರಿನ ಸರ್ಕಾರಿ ಹೈಸ್ಕೂಲ್‌ನಲ್ಲಿ ನಡೆದ ವಾರ್ಷಿಕ ಸಭೆಯಲ್ಲಿ 'ಕರ್ನಾಟಕ ಸಾಹಿತ್ಯ ಪರಿಷತ್ತು' ಉದಯವಾಯಿತು. ಕರ್ನಾಟಕ ಸಾಹಿತ್ಯ ಪರಿಷತ್ತು ರೂಪುಗೊಳ್ಳಲು ದಿವಾನರಾಗಿದ್ದ ಸರ್.ಎಂ. ವಿಶ್ವೇಶ್ವರಯ್ಯ, ಸರದಾರ್ ಎಂ.ಕಾಂತರಾಜೇ ಅರಸ್, ಎಚ್.ವಿ. ನಂಜುಂಡಯ್ಯ, ಎಂ. ಶ್ಯಾಮರಾವ್, ಎಂ.ಎಸ್. ಕುಟ್ಟಣ್ಣ, ಎಂ.ಕೆ. ವೆಂಕಟಕೃಷ್ಣಯ್ಯ, ಎಚ್. ಲಿಂಗರಾಜೇ ಅರಸ್, ಕರ್ಪೂರ ಶ್ರೀನಿವಾಸ ರಾವ್, ಬಿ. ಕೃಷ್ಣಪ್ಪ, ಕವಿ ತಿಲಕಶಾಸ್ತ್ರಿ, ಮುದವೀಡು ಕೃಷ್ಣರಾಯರು, ವಾಸುದೇವಾಚಾರ್, ಆಲೂರು ವೆಂಕಟರಾಯರು ಹೀಗೆ ಹಲವರು ಕಾರಣರಾಗಿದ್ದಾರೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಸ್. ಮಹೇಶ್ ಕುಮಾರ್, ಕಸಾಪ ಜಿಲ್ಲಾಧ್ಯಕ್ಷ ಡಾ. ಕೋಡಿರಂಗಪ್ಪ ಮಾತನಾಡಿದರು.

ಈ ವೇಳೆ ಕನ್ನಡದಲ್ಲಿ ಅತಿಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಮತ್ತು ಪ್ರಬಂಧ ರಚನೆ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಚಿಕ್ಕಬಳ್ಳಾಪುರ ವಿವಿ ಶಿಕ್ಷಣ ಕಾಲೇಜಿನ ಡೀನ್ ಮತ್ತು ಪ್ರಾಂಶುಪಾಲ ಡಾ. ಜಿ. ಪಿ. ಬಾಹುಬಲಿ , ಡಿಡಿಪಿಐ ರಮೇಶ್, ಜಿಲ್ಲಾ ಕ.ಸಾ.ಪ. ಗೌರವ ಕೋಶಾಧ್ಯಕ್ಷ ಎಂ. ಚನ್ನಮಲ್ಲಿಕಾರ್ಜುನಯ್ಯ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಕಾಗತಿ ನಾಗರಾಜಪ್ಪ, ಶಿಡ್ಲಘಟ್ಟ ತಾಲೂಕು ಕ.ಸಾ.ಪ. ಅಧ್ಯಕ್ಷ ಪಟೇಲ್ ನಾರಾಯಣಸ್ವಾಮಿ, ಮಂಚನಬಲೆ ಶ್ರೀನಿವಾಸ್ ಮತ್ತಿತರರು ಭಾಗವಹಿಸಿದ್ದರು.

ಚಿಕ್ಕಬಳ್ಳಾಪುರದಲ್ಲಿ ಬಿಜೆಪಿ ವಿಜಯೋತ್ಸವ

ಬಿಜೆಪಿ ಕಚೇರಿ ಎದುರು ನೂರಾರು ಕಾರ್ಯಕರ್ತರ ಅದ್ದೂರಿ ಆಚರಣೆ | ಪಟಾಕಿ ಸಿಡಿಸಿ ಸಿಹಿ ವಿತರಿಸಿ ಸಂಭ್ರಮ

• **ಕನ್ನಡಪ್ರಭ ವಾರ್ತೆ,** ಚಿಕ್ಕಬಳ್ಳಾಪುರ:

ಪಶ್ಚಿಮ ಬಂಗಾಳ ಸೇರಿ ಮೂರು ರಾಜ್ಯಗಳ ವಿಧಾನಸಭಾ ಚುನಾವಣಾ ಫಲಿತಾಂಶದಲ್ಲಿ ಬಿಜೆಪಿ ಭರ್ಜರಿ ಬಹುಮತ ಪಡೆದ ಹಿನ್ನೆಲೆಯಲ್ಲಿ ನಗರದಲ್ಲಿ ಜಿಲ್ಲಾ ಬಿಜೆಪಿಯಿಂದ ಅದ್ದೂರಿ ಸಂಭ್ರಮಾಚರಣೆ ನಡೆಸಲಾಯಿತು.

ನಗರದ ವಾಪಸಂದ್ರದ ಉತ್ತರ ಬಡಾವಣೆಯಲ್ಲಿ ಇರುವ ಜಿಲ್ಲಾ ಬಿಜೆಪಿ ಕಚೇರಿ ಮುಂಭಾಗದಲ್ಲಿ ನೆರೆದಿದ್ದ ನೂರಾರು ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರಗೌಡ ಮಾತನಾಡಿ, ಮೋದಿಜೀ ನಾಯಕತ್ವದಲ್ಲಿ ಅಸ್ಸಾಂ, ಪುದುಚೇರಿ ಮತ್ತು ಪಶ್ಚಿಮ ಬಂಗಾಳದಲ್ಲಿ ಕಮಲ ಅರಳಿ ಅಸಾಧ್ಯವಾದುದನ್ನು ಸಾಧ್ಯವಾಗಿಸಿದ್ದಾರೆ. ಹೆಮ್ಮೆಯ ಪ್ರಧಾನಿ ಮೋದಿಜೀ ಅವರ ಅಭಿವೃದ್ಧಿ ರಾಜಕಾರಣ ಮತ್ತು ಅವರ ವಿಕಸಿತ ಭಾರತದ ಪರಿಕಲ್ಪನೆಗೆ ಬಂಗಾಳದ ಜನತೆ ಸ್ಪಷ್ಟ ಬೆಂಬಲ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ದಶಕಗಳ ಕಾಲ, ಬಂಗಾಳದ ಜನರು ಭಯದಿಂದ ಬದುಕುತ್ತಿದ್ದರು. ಮಮತಾ ಬ್ಯಾನರ್ಜಿಯವರ ಟಿಎಂಸಿಯ ಕ್ರೂರ ಆಡಳಿತದಲ್ಲಿ, ಪ್ರಜಾಪ್ರಭುತ್ವವನ್ನು ನಿಗ್ರಹಿಸಲಾಗಿತ್ತು, ಹಿಂಸೆ, ಹತ್ಯೆ, ಹಲ್ಲೆಗಳ ಮೂಲಕ ಜನಧ್ವನಿಯನ್ನು ನಿಗ್ರಹಿಸಲಾಗಿತ್ತು ಮತ್ತು ಹಿಂಸಾಚಾರವೇ ಎಲ್ಲ ಭಿನ್ನಾಭಿಪ್ರಾಯಕ್ಕೆ ಉತ್ತರ ಎನ್ನುವಂತಾಗಿತ್ತು. ಆದರೆ ಈ ಬಾರಿ ಬಂಗಾಳದ ಜನರು ಹೆದರಲಿಲ್ಲ. ಅವರು ಭಯ ಇಲ್ಲ, ಭರವಸೆ ಇದೆ ಎಂದು ಬಿಜೆಪಿಗೆ ಗೆಲವು ತಂದು ಕೊಟ್ಟಿದ್ದಾರೆ ಎಂದರು.

ಬಿಜೆಪಿ ರಾಜ್ಯ ಕಾರ್ಯದರ್ಶಿ ಸಿ.ಮುನಿರಾಜು ಮಾತನಾಡಿ, ಬಂಗಾಳದಲ್ಲಿ ದುರಾಡಳಿತ ಇಂದಿಗೆ ಕೊನೆಯಾಗಿದೆ. ಮುಂದೆ ಬಿಜೆಪಿ ನೇತೃತ್ವದಲ್ಲಿ ಸುಸಂಸ್ಕೃತವಾಗಿ, ಸಮೃದ್ಧವಾಗಿ ಅಭಿವೃದ್ಧಿಯಾಗಲಿದೆ ಎಂದರು.

ಸಂಭ್ರಮಾಚರಣೆಯಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಹೆಚ್.ಎಸ್. ಮುರಳೀಧರ್, ಮಧು ಸೂರ್ಯನಾರಾಯಣರೆಡ್ಡಿ, ಮಾಧ್ಯಮ ವಕ್ತಾರ ಮಧುಚಂದ್ರ, ಕಾರ್ಯದರ್ಶಿ ಆರ್.ಹೆಚ್. ಎನ್. ಅಶೋಕ್ ಕುಮಾರ್, ಮುಖಂಡರಾದ ವೇಣುಗೋಪಾಲ್, ಸೀಕಲ್ ಆನಂದಗೌಡ, ಲಕ್ಷ್ಮೀನಾರಾಯಣಗುಪ್ತ, ಎ.ವಿ. ಬೈರೇಗೌಡ, ಸುಮಿತ್ರಮ್ಮ, ಪ್ರಭಾಕರರೆಡ್ಡಿ, ದೇವಸ್ಥಾನದ ಹೊಸಹಳ್ಳಿ ರಾಮಣ್ಣ, ತೇಜೆಂದ್ರಪಾಪು, ಕೋಡಿರ್ಲಪ್ಪ, ನರಸಿಂಹರಾಜು, ವೇಣುಮಾಧವ್, ಶಶಿಧರ್, ನರಸಪ್ಪ,ನಂದಿ ಮುನಿಸ್ವಾಮಿ ಮತ್ತಿತರರು ಇದ್ದರು.



ಪಶ್ಚಿಮ ಬಂಗಾಳ ಸೇರಿ ಮೂರು ರಾಜ್ಯಗಳ ವಿಧಾನಸಭಾ ಚುನಾವಣಾ ಫಲಿತಾಂಶದಲ್ಲಿ ಬಿಜೆಪಿ ಭರ್ಜರಿ ಬಹುಮತ ಪಡೆದ ಹಿನ್ನೆಲೆಯಲ್ಲಿ ನಗದಲ್ಲಿ ಜಿಲ್ಲಾ ಬಿಜೆಪಿಯಿಂದ ಅದ್ದೂರಿ ಸಂಭ್ರಮಾಚರಣೆ ನಡೆಸಲಾಯಿತು.

- ಅಸ್ಸಾಂ, ಪುದುಚೇರಿ, ಪಶ್ಚಿಮ ಬಂಗಾಳದಲ್ಲಿ ಕಮಲ ಅರಳಿ ಅಸಾಧ್ಯವಾದುದು ಸಾಧ್ಯವಾಗಿದೆ
- ಪ್ರಧಾನಿ ಮೋದಿ ಅವರ ಅಭಿವೃದ್ಧಿ ರಾಜಕಾರಣ,ವಿಕಸಿತ ಭಾರತದ ಕಲ್ಪನೆಗೆ ಬಂಗಾಳದಲ್ಲಿ ತಕ್ಕ ಉತ್ತರ
- ಟಿಎಂಸಿಯ ಕ್ರೂರ ಆಡಳಿತಕ್ಕೆ ಮತದಾರರಿಂದ ಸ್ಪಷ್ಟ ಅಭಿಪ್ರಾಯ

ಬಂಗಾರಪೇಟೆ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ನಾಗೇಂದ್ರ



ಬಂಗಾರಪೇಟೆ: ತಾಲೂಕಿನ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಶಿಕ್ಷಕರ ಸಂಘದ ಅಧ್ಯಕ್ಷರ ಚುನಾವಣೆಯಲ್ಲಿ ಮೂರು ಬಣಗಳ ನಡುವೆ ತೀವ್ರ ಪೈಪೋಟಿ ಕಂಡುಬಂದ ಹಿನ್ನೆಲೆ ಶಾಸಕರ ಮಧ್ಯಪ್ರವೇಶದಿಂದ ಅಧಿಕಾರ ವಿಕೇಂದ್ರೀಕರಣದ ಸೂತ್ರದಡಿ ಮೊದಲನೆ ಹಂತವಾಗಿ ಬೆಂಗನೂರು ಶಾಲಾ ಶಿಕ್ಷಕ ನಾಗೇಂದ್ರ ಅವಿರೋಧವಾಗಿ ಆಯ್ಕೆಯಾದರು.

5 ವರ್ಷದ ಅವಧಿಯನ್ನು ಮೂರು ಹಂತಗಳಾಗಿ ಹಂಚಿ, ಮೊದಲ ಅವಧಿಗೆ ನಾಗೇಂದ್ರ, ಎರಡನೇ ಅವಧಿಗೆ ಅಪ್ಪಯ್ಯಗೌಡ ಹಾಗೂ ಮೂರನೇ ಅವಧಿಗೆ ಶಾಮಮೂರ್ತಿ ಅವರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲು ತೀರ್ಮಾನಿಸಲಾಯಿತು. ಉಪಾಧ್ಯಕ್ಷರಾಗಿ ಕೆ.ಜಿ. ಶ್ರೀನಿವಾಸ್ ಮತ್ತು ಪ್ರೇಮಲತಾ ಸೇರಿದಂತೆ ಒಂಬತ್ತು ಸದಸ್ಯರ ಆಡಳಿತ ಮಂಡಳಿಯನ್ನೂ ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ನೂತನ ಅಧ್ಯಕ್ಷ ನಾಗೇಂದ್ರ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಿ, ಶೈಕ್ಷಣಿಕ ವ್ಯವಸ್ಥೆ ಬಲಪಡಿಸಲು ಪ್ರಯತ್ನಿಸಲಾಗುವುದು ಎಂದು ಹೇಳಿದರು.

ಲಕ್ಷ್ಮೀನರಸಿಂಹ ಶಾಸ್ತ್ರಿಗಳಿಗೆ ನಾರೇಯಣ ಪ್ರಶಸ್ತಿ

ಚಿಂತಾಮಣಿ: ಸದ್ಗುರು ಶ್ರೀಯೋಗಿನಾರೇಯಣ ತಾತಯ್ಯನವರ ತತ್ವಬೋಧನೆಗಳಿಗೆ ಭಾವಾನುವಾದ, ತಾತ್ಪರ್ಯಗಳನ್ನು ರಚಿಸಿ ಅಪಾರ ಕೊಡುಗೆ ನೀಡಿರುವ ದಿ.ಶ್ರೀಕೈಪು ಲಕ್ಷ್ಮೀನರಸಿಂಹ ಶಾಸ್ತ್ರಿಗಳಿಗೆ ಮರಣೋತ್ತರವಾಗಿ ನಾರೇಯಣ ಪ್ರಶಸ್ತಿಯನ್ನು ಮೇ 9 ರಂದು ಸಂಜೆ 5 ಗಂಟೆಗೆ ಪ್ರದಾನ ಮಾಡಲಾಗುತ್ತದೆ.

ಈ ಪ್ರಶಸ್ತಿಯು ಒಂದು ಲಕ್ಷ ರು. ಒಳಗೊಂಡಿದೆ ಎಂದು ಕೈವಾರ ಕ್ಷೇತ್ರದ ಧರ್ಮಾಧಿಕಾರಿ ಡಾ.ಎಂ.ಆರ್. ಜಯರಾಮ್ ತಿಳಿಸಿದ್ದಾರೆ. ಮಠದಲ್ಲಿ ಸುದ್ದಿಗಾರರಿಗೆ ಈ ವಿಷಯ ತಿಳಿಸಿದ ಅವರು ಟ್ರಸ್ಟ್ ಸಮಿತಿಯ ಸದಸ್ಯರ ಸಭೆಯಲ್ಲಿ ಈ ನಿರ್ಣಯ ತೆಗೆದುಕೊಳ್ಳಲಾಗಿದೆ. ಕೈವಾರ ತಾತಯ್ಯನವರ 300 ನೇ ಜಯಂತಿಯನ್ನು ವರ್ಷಪೂರ್ತಿ ಆಚರಿಸುತ್ತಿರುವ ಈ ಸಂದರ್ಭದಲ್ಲಿ ಸೂಕ್ತ ವ್ಯಕ್ತಿಗಳಿಗೆ ನಾರೇಯಣಪ್ರಶಸ್ತಿನೀಡಿಗೌರವಿಸಲುತೀರ್ಮಾನಿಸಲಾಗಿದೆ. ಆದರಂತೆ ಕೈಪು ಲಕ್ಷ್ಮೀನರಸಿಂಹಶಾಸ್ತ್ರಿಗಳಿಗೆ ಪ್ರಥಮವಾಗಿ ನಾರೇಯಣ ಪ್ರಶಸ್ತಿಯನ್ನು ನೀಡಲಾಗುತ್ತಿದೆ ಎಂದರು.

ಶ್ರೀಕೈಪು ಲಕ್ಷ್ಮೀನರಸಿಂಹಶಾಸ್ತ್ರಿಗಳ ಕೈವಾರ ಶ್ರೀಯೋಗಿ ನಾರೇಯಣ ತಾತಯ್ಯನವರ ಸಾಹಿತ್ಯವನ್ನು ಆಳವಾಗಿ ಅಧ್ಯಯನ ಮಾಡಿ, ತಾತಯ್ಯನವರು ರಚಿಸಿರುವ ಎಲ್ಲಾ ಗ್ರಂಥಗಳಿಗೆವ್ಯಾಖ್ಯಾನತಾತ್ಪರ್ಯವನ್ನುರಚಿಸಿ ಬಹುದೊಡ್ಡ ಕೊಡುಗೆಯನ್ನು ನೀಡಿದ್ದಾರೆ. ಇದು ಅವರ ಜೀವಮಾನದ ಸಾಧನೆಯಾಗಿದೆ ಎಂದರು.

ಕಾರ್ಮಿಕರಿಗೆ ಸ್ಪಂದಿಸದ ಸರ್ಕಾರ: ಶಿವಶಂಕರ್

ಕೇಂದ್ರ,ರಾಜ್ಯ ಸರ್ಕಾರಗಳ ವಿರುದ್ಧ ಕಟ್ಟಡ ಕಾರ್ಮಿಕರ ಒಕ್ಕೂಟದ ಆಕ್ರೋಶ

ಬಾಗೇಪಲ್ಲಿ: ಕಾರ್ಮಿಕರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ನಮ್ಮನ್ನಾಳುವ ಸರ್ಕಾರಗಳು ಮೀನಮೇಷ ಎಣಿಸುತ್ತಿವೆ ಎಂದು ಕಟ್ಟಡ ಕಾರ್ಮಿಕರ ಒಕ್ಕೂಟದ ತಾಲೂಕು ಅಧ್ಯಕ್ಷ ಶಿವಶಂಕರ್‌ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.



ಕಾರ್ಮಿಕರ ದಿನಾಚರಣೆ ಅಂಗವಾಗಿ ಕಟ್ಟಡ ಕಾರ್ಮಿಕರ ಒಕ್ಕೂಟದಿಂದ ಪಟ್ಟಣದ ಕಟ್ಟಡ ಕಾರ್ಮಿಕರ ಒಕ್ಕೂಟದ ಭವನದಲ್ಲಿ ಆಯೋಜಿಸಿದ್ದ ಕಾರ್ಮಿಕ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ರಾಜ್ಯದಲ್ಲಿ ಅಸಂಘಟಿತರ ಸಂಖ್ಯೆ ಹೆಚ್ಚಾಗಿದೆ. ಆದರೆ ನಮ್ಮನ್ನಾಳುವ ಯಾವುದೇ ಸರ್ಕಾರಗಳು ಅಸಂಘಟಿತ ಕೂಲಿ ಕಾರ್ಮಿಕರ ಕಲ್ಯಾಣಕ್ಕಾಗಿ ಹಲವು ಯೋಜನೆಗಳನ್ನು ರೂಪಿಸಿದೆ. ಆದರೆ ಕೂಲಿ ಕಾರ್ಮಿಕರಿಗೆ ಸರ್ಕಾರದ ಈ ಯೋಜನೆಗಳ ಬಗ್ಗೆ ಮಾಹಿತಿ ಕೊರತೆಯಿಂದ ಸರ್ಕಾರದ ಸಿಗುವ ಸೌಲಭ್ಯಗಳಿಂದವಂಚಿತರಾಗುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ಇದಕ್ಕೂ ಮೊದಲು ಕಟ್ಟಡ ಕಾರ್ಮಿಕರ ಒಕ್ಕೂಟದ ವತಿಯಿಂದ ಪಟ್ಟಣದ ಮುಖ್ಯ ರಸ್ತೆಯಲ್ಲಿ ಮೆರವಣಿಗೆ ನಡೆಸಿದರು.

ಈ ಸಂದರ್ಭದಲ್ಲಿ ಕಟ್ಟಡ ಕಾರ್ಮಿಕರ ಒಕ್ಕೂಟದ ಉಪಾಧ್ಯಕ್ಷ ಚಿನ್ನಪ್ಪಯ್ಯ, ಕಾರ್ಯದರ್ಶಿಗಳಾದ ವಿಶ್ವನಾಥ್, ಚಲಪತಿ, ಖಾಜಾಪೀರ್ ಪದಾಧಿಕಾರಿಗಳಾದ ಬಷೀರ್‌ಸಾಬ್, ನರಸಿಹಮೂರ್ತಿ, ಅಂಜಿ, ರವಿ, ಚಂದ್ರಶೇಖರ್, ನಯಾಜ್, ಹರೀಶ್, ಮಂಜುನಾಥ್, ಆನಂದ್ ಮತ್ತಿತರರು ಇದ್ದರು.

ಚಿಂತಾಮಣಿ ಆರ್‌ಕೆ ವಿಷನ್‌ಗೆ ಶೇ.100 ಫಲಿತಾಂಶ

ಚಿಂತಾಮಣಿ: ಹೊರವಲಯದ ಆರ್ ಕೆವಿಷನ್ ಹೈಯರ್‌ಪ್ರೈಮರಿ ಐಸಿಎಸ್ ಇ ಶಾಲೆಗೆ 10ನೇ ತರಗತಿ ಪರೀಕ್ಷೆಯಲ್ಲಿ ಶೇ. 100ರಷ್ಟು ಫಲಿತಾಂಶ ಬಂದಿದೆ. ಪರೀಕ್ಷೆಗೆ ಹಾಜರಾಗಿದ್ದ 32 ವಿದ್ಯಾರ್ಥಿಗಳಲ್ಲಿ ಎಲ್ಲರೂ ಉತ್ತೀರ್ಣ ರಾಗಿದ್ದು, ಮಹೋನ್ನತ ಶ್ರೇಣಿ-2, ಅತ್ಯುತ್ತಮ-15, ಉತ್ತಮ-11, ಪ್ರಥಮದರ್ಜೆ-4 ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿಗಳಾದ ತನವ್- 500 ಕ್ಕೆ 473, ಕೆ.ಎಸ್. ದರ್ಶನ್-456 , ಎಂ. ಚಿಕಿತ-442, ಎ. ಚರಿತ ಆರ್ಯ 441, ಜನೀಷ-439, ಆರ್. ಸಮರ್ಥ್-438, ಪಿ.ಎಸ್. ಚಾರುಹಾಸಿನಿ-437, ಎಂ. ದೀಕ್ಷ -431 ಅಂಕಗಳನ್ನು ಕ್ರಮವಾಗಿ ಪಡೆದಿದ್ದಾರೆ. ಈ ವಿದ್ಯಾರ್ಥಿಗಳ ಸಾಧನೆಗೆ ಶ್ರಮಿಸಿದ ಶಿಕ್ಷಕರನ್ನು ಸಂಸ್ಥೆಯ ಅಧ್ಯಕ್ಷ ಕೆ. ರಾಮಕೃಷ್ಣ, ಕಾರ್ಯದರ್ಶಿ ಕೆ.ಆರ್. ಪ್ರೇಮಲತಾ, ನಿರ್ದೇಶಕ ಡಾ.ಜಿವಿಕೆ. ರೆಡ್ಡಿ, ಆಡಳಿತ ಮಂಡಳಿಯ ಕೆ.ವಿ. ವರುಣ್, ತನುಶ್ರೀರಾಮ್, ಪ್ರಾಂಶುಪಾಲ ದುರ್ಗಾಪ್ರಸಾದ್ ಬಿ. ಸುಗಂತಿ ತುಂಬು ಹೃದಯದಿಂದ ಅಭಿನಂದಿಸಿದ್ದಾರೆ.

